ಕನ್ನಡ ದಿನಪತ್ರಿಕೆ
04 ಮೇ । ಶನಿವಾರ
04 MAY 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 66 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಶಿವಸೇನಾ ನಾಯಕಿಯನ್ನು ಕರೆದೊಯ್ಯುತ್ತಿದ್ದ ಹೆಲಿಕಾಪ್ಟರ್ ಪತನ

ಮುಂಬೈ: ಮಹಾರಾಷ್ಟ್ರದ ಶಿವಸೇನಾ ನಾಯಕಿಯನ್ನು ಕರೆದೊಯ್ಯುತ್ತಿದ್ದ ಹೆಲಿಕಾಪ್ಟರ್, ಲ್ಯಾಂಡಿಂಗ್ ವೇಳೆ ಪತನಗೊಂಡಿದ್ದು ಅದೃಷ್ಟವಶಾತ್ ಹೆಲಿಕಾಪ್ಟರ್ ನಲ್ಲಿದ್ದವರೆಲ್ಲರೂ ಅಪಾಯದಿಂದ ಪಾರಾಗಿದ್ದಾರೆ.

ಉದ್ಧವ್ ಠಾಕ್ರೆ ಬಣದ ಶಿವಸೇನಾ ನಾಯಕಿ ಸುಷ್ಮಾ ಅವರನ್ನು ಸಭೆಯೊಂದರಲ್ಲಿ ಪಾಲ್ಗೊಳ್ಳಲು ಕರೆದೊಯ್ಯುವ ವೇಳೆ ರಾಯಗಢ ಜಿಲ್ಲೆಯಲ್ಲಿ ಹೆಲಿಕಾಪ್ಟರ್ ಲ್ಯಾಂಡ್ ಆಗುವಾಗ ಈ ಅವಘಡ ಸಂಭವಿಸಿದೆ.

ಇದರ ಪರಿಣಾಮ ಹೆಲಿಕಾಪ್ಟರ್ ಸಂಪೂರ್ಣ ನಜ್ಜುಗುಜ್ಜಾಗಿದ್ದು ಇದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಈ ಅಪಘಾತದಲ್ಲಿ ಪೈಲೆಟ್ ಸೇರಿದಂತೆ ಹೆಲಿಕ್ಯಾಪ್ಟರ್ ನಲ್ಲಿದ್ದ ಎಲ್ಲರೂ ಅಪಾಯದಿಂದ ಪಾರಾಗಿದ್ದಾರೆ.

## ಸಿಡಿಲು ಬಡಿದು ಮಹಿಳೆ ಹಾಗೂ 20ಕ್ಕೂ ಹೆಚ್ಚು ಮೇಕೆಗಳು ಸಾವು

ಬೆಂಗಳೂರು: ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು, ಸಿಡಿಲು, ಬಿರುಗಾಳಿ ಸಹಿತ ಭಾರಿ ಮಳೆಯಾಗುತ್ತಿದೆ. ಈ ನಡುವೆ ಮಹಿಳೆಯೋರ್ವರು ಸಿಡಿಲು ಬಡಿದು ಮೃತಪಟ್ಟಿರುವ ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆಯ ಗಣಗಲು ಗ್ರಾಮದಲ್ಲಿ ಈ ದುರಂತ ಸಂಭವಿಸಿದೆ.

ಮಹಿಳೆಯ ಜೊತೆ 20ಕ್ಕೂ ಹೆಚ್ಚು ಮೇಕೆಗಳು ಸಾವನ್ನಪ್ಪಿವೆ. ಬಿರುಗಾಳಿ, ಮಳೆಯಾಗುತ್ತಿದ್ದಂತೆ ಮಹಿಳೆ ಹಾಗೂ ಮೇಕೆಗಳು ಮರದ ಕೆಳಗೆ ನಿಂತುಕೊಂಡಿದ್ದರು. ಏಕಾಏಕಿ ಸಿಡಿಲು ಬಡಿದಿದ್ದು, ಸ್ಥಳದಲ್ಲೇ ಮಹಿಳೆ ಹಾಗೂ 20ಕ್ಕೂ ಹೆಚ್ಚು ಮೇಕೆಗಳು ಸಾವನ್ನಪ್ಪಿವೆ.

## ಸಂವಿಧಾನ ಬದಲಾವಣೆ ಆದ್ರೆ ನನ್ನ ತಲೆ ಕತ್ತರಿಸಿ ರಾಮಲಿಂಗೇಶ್ವರನಿಗೆ ಅರ್ಪಿಸಿ: ಬಿಜೆಪಿ ಶಾಸಕ ಶಿವರಾಜ್ ಪಾಟೀಲ್

ರಾಯಚೂರು: ಭಾರತೀಯ ಜನತಾ ಪಾರ್ಟಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡುತ್ತಾರೆ ಅಂತ ಕಾಂಗ್ರೆಸ್ ನಾಯಕರು ಆರೋಪ ಮಾಡುತ್ತಿದ್ದಾರೆ. ರಾಮಲಿಂಗೇಶ್ವರ ದೇವರ ಮೇಲೆ ಆಣೆ ಮಾಡಿ ಹೇಳುತ್ತೇನೆ, ನಮ್ಮ ಬಿಜೆಪಿ ಸರ್ಕಾರ ಸಂವಿಧಾನ ಮುಟ್ಟುವುದಿಕಲ್ಲ, ಸಂವಿಧಾನ ಬದಲಾವಣೆ ಮಾಡುವುದಿಲ್ಲ. ಸಂವಿಧಾನ ಬದಲಾವಣೆ ಆದರೆ ನನ್ನ ತಲೆ ಕತ್ತರಿಸಿ ರಾಮಲಿಂಗೇಶ್ವರನಿಗೆ ಅರ್ಪಿಸಿ ಎಂದು ಬಿಜೆಪಿ ಶಾಸಕ ಡಾ. ಶಿವರಾಜ್ ಪಾಟೀಲ್ ಹೇಳಿದರು.

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ರಾಯಚೂರಿನಲ್ಲಿ ಗುರುವಾರ (ಮೇ 02) ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ನಮ್ಮ ಪಕ್ಷದ ಯಾ ಒಬ್ಬ ನಾಯಕರು ಕೂಡ ಸಂವಿಧಾನ ಬದಲಾವಣೆ ಮಾಡಲ್ಲ ಎಂದರು.

ಕಾಂಗ್ರೆಸ್ನವರು ಬರೀ ಸುಳ್ಳು ಹೇಳುತ್ತಿದ್ದಾರೆ. ಬಿಜೆಪಿ ಅಧಿಕಾರಕ್ಕೆ ಬಂದರೆ ನಿಮ್ಮನ್ನು ದೇಶದಲ್ಲಿ ಇರಲು ಬಡಲ್ಲ ಅಂತ ಕಾಂಗ್ರೆಸ್ಸುಮರಿಗೆ ಹೆದರಿಸುತ್ತಿದೆ. ಬಿಜೆಪಿ ಅಧಿಕಾರಕ್ಕೆ ಬಂದರೇ ಸಂವಿಧಾನ ಬದಲಾವಣೆ ಮಾಡುತ್ತಾರೆ ಅಂತ ನನ್ನ ದಲಿತ ಬಂಧುಗಳಿಗೆ ಹೇಳುತ್ತಿದ್ದಾರೆ ಎಂದರು.

# ಎಲ್ಲಾ ಸ್ಥಾನಗಳಲ್ಲಿ ಬಿಜೆಪಿಯನ್ನು ಗೆಲ್ಲಿಸುವ ಮೂಲಕ ಕರ್ನಾಟಕದ ಜನತೆ ಕಾಂಗ್ರೆಸ್‌ಗೆ ತಕ್ಕ ಉತ್ತರ ನೀಡಲಿದ್ದಾರೆ: ಅಮಿತ್ ಶಾ

ಕರ್ನಾಟಕದ ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ನಡೆದ ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಹಾಗೂ ಬಿಜೆಪಿಯ ವರಿಷ್ಠ ನಾಯಕ ಅಮಿತ್ ಶಾ, ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿ, 2024ರ ಐತಿಹಾಸಿಕ ಚುನಾವಣೆ ರೂ12 ಲಕ್ಷ ಕೋಟಿ ಹಗರಣ ಮಾಡಿರುವ ಭ್ರಷ್ಟ ಕಾಂಗ್ರೆಸ್ ಪಕ್ಷ ಮತ್ತು ನಯಾ ಪೈಸೆಯಷ್ಟು ಹಗರಣ ಮಾಡದ ಪ್ರಮಾಣಿಕ ಪ್ರಧಾನಿ ನರೇಂದ್ರ ಮೋದಿ ಅವರ ನಡುವಿನ ನೇರ ಸ್ಪರ್ಧೆಯಾಗಿದೆ. ಎಲ್ಲಾ ಸ್ಥಾನಗಳಲ್ಲಿ ಬಿಜೆಪಿಯನ್ನು ಗೆಲ್ಲಿಸುವ ಮೂಲಕ ಕರ್ನಾಟಕದ ಜನತೆ ಕಾಂಗ್ರೆಸ್ಗೆ ತಕ್ಕ ಉತ್ತರ ನೀಡಲಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರ ಕಾಶ್ಮೀರದ ಬಗೆಗಿನ ಅರ್ಥಹೀನ ಟೀಕೆಗಳ ಬಗ್ಗೆ ತೀವ್ರ ವಾಗ್ದಾಳಿ ನಡೆಸಿದ ಅವರು, ಕರ್ನಾಟಕ ಮತ್ತು ರಾಜಸ್ಥಾನದ ಜನರಿಗೂ ಕಾಶ್ಮೀರಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಖರ್ಗೆ ಹೇಳಿದ್ದಾರೆ, ಇದು ಭಾರತದ ರಾಜ್ಯಗಳ ಒಕ್ಕೂಟದ ಬಗ್ಗೆ ಅವರಿಗಿರುವ ಸಂಕುಚಿತ ತಿಳುವಳಿಕೆಗೆ ಸಾಕ್ಷಿಯಾಗಿದೆ. ಈ ಹೇಳಿಕೆಗಳು ಬಿಜೆಪಿಯ ಭಾರತೀಯ ಒಕ್ಕೂಟದ ಕಲ್ಪನೆಗೆ ವಿರೋಧವಾಗಿರುವ, ಕಾಂಗ್ರೆಸ್ನ ಆಳವಾಗಿ

ಬೇರೂರಿರುವ ಪ್ರಾದೇಶಿಕ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತವೆ. ತುಷ್ಟೀಕರಣದ ರಾಜಕೀಯದಿಂದ ಪ್ರೇರೇಪಿತವಾಗಿರುವ ಕಾಂಗ್ರೆಸ್, 370 ನೇ ವಿಧಿಯನ್ನು ಕೇವಲ ಮತ ಬ್ಯಾಂಕ್ ಆಗಿ ಬಳಸಿಕೊಂಡಿತು, ಅದು ಐತಿಹಾಸಿಕ ತಪ್ಪನ್ನು ಸರಿಪಡಿಸಲು ಬೇರೆ ಏನೂ ಮಾಡಲಿಲ್ಲ. ಧಾರವಾಡದ ಪ್ರತಿ ಮಗುವೂ ಕಾಶ್ಮೀರಕ್ಕಾಗಿ ಪ್ರಾಣ ತ್ಯಾಗ ಮಾಡಲು ಸಿದ್ಧ ಎಂಬುದನ್ನು ಖರ್ಗೆ ಅರಿಯಬೇಕು ಎಂದು ಶಾ ಹೇಳಿದರು. ಜನತೆಯ ರಾಷ್ಟ್ರೀಯತಾವಾದಿ ಬಯಕೆಯನ್ನು ಗೌರವಿಸಿ ಮೋದಿ ಸರ್ಕಾರವು 370 ನೇ ವಿಧಿಯನ್ನು ರದ್ದುಗೊಳಿಸುವ ಮೂಲಕ ಐತಿಹಾಸಿಕ ತಪ್ಪನ್ನು ಸರಿಪಡಿಸಿ ಕಾಶ್ಮೀರದಲ್ಲಿ ಶಾಂತಿ ಮತ್ತು ಸಮೃದ್ಧಿಯ ಹೊಸ ಯುಗವನ್ನು ಪ್ರಾರಂಭಿಸಿತು.

ಭಯೋತ್ಪಾದನೆಯ ಬಗ್ಗೆ ಕಾಂಗ್ರೆಸ್ ಅತ್ಯಂತ ಬೇಜವಾಬ್ದಾರಿ ಧೋರಣೆ ಹೊಂದಿತ್ತು, ಇದು ಭಾರತವು ಪಾಕಿಸ್ತಾನದಲ್ಲಿನ ಭಯೋತ್ಪಾದಕರಿಗೆ ನೇರ ಗುರಿಯಾಗಲು ಕಾರಣವಾಯಿತು. ವೋಟ್ ಬ್ಯಾಂಕ್ ಓಲೈಕೆ ರಾಜಕಾರಣದಿಂದಾಗಿ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಲಿಲ್ಲ. ಏತನ್ಮಧ್ಯೆ, ನರೇಂದ್ರ ಮೋದಿ ಅವರು ಪಾಕ್ ನೆಲದಲ್ಲಿ ಯುದ್ಧತಂತ್ರಯೋಜಿತ ವಾಯು ಮತ್ತು ಸರ್ಜಿಕಲ್ ಸ್ಟ್ರೈಕ್ಗಳನ್ನು ನಡೆಸುವ ಮೂಲಕ ಭಯೋತ್ಪಾದಕರಿಗೆ ತಕ್ಕ ಉತ್ತರ ನೀಡಿದರು. ಇತ್ತೀಚಿನ ಬೆಂಗಳೂರು ಸ್ಫೋಟಗಳಲ್ಲಿ ಕೂಡ ಕಾಂಗ್ರೆಸ್ನ ಬೇಜವಾಬ್ದಾರಿ ಧೋರಣೆಯು ಸ್ಪಷ್ಟವಾಗಿ ಕಂಡುಬಂದಿತು, ಪಕ್ಷವು ಎಸ್ಡಿಪಿಐ ಸಹಾಯದಿಂದ ಚುನಾವಣೆಯಲ್ಲಿ ಗೆದ್ದಿದ್ದರಿಂದ ಬಾಂಬ್ ಸ್ಫೋಟಗಳನ್ನು ಕೇವಲ ಗ್ಯಾಸ್ ಸಿಲಿಂಡರ್ ಸ್ಫೋಟ ಎಂದು ಅನುಕೂಲಕರವಾಗಿ ಲೇಬಲ್ ಮಾಡಿತು. ಎನ್ಐಎ ತನ್ನ ವಿಸ್ತೃತ ವರದಿಯಲ್ಲಿ ಭಾರತ ವಿರೋಧಿ ಪಡೆಗಳಿಂದ ಸ್ಫೋಟ ನಡೆಸಲಾಗಿದೆ ಎಂದು ಸ್ಪಷ್ಟಪಡಿಸಿದೆ. ಈಗ, ಕರ್ನಾಟಕದ ಜನರು ಭಾರತ ವಿರೋಧಿ ಶಕ್ತಿಗಳೊಂದಿಗೆ ಕೈಜೋಡಿಸುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೋ ಅಥವಾ ಅಜೇಯ ಭದ್ರತಾ ವ್ಯವಸ್ಥೆಯನ್ನು ಸ್ಥಾಪಿಸಲು ಹಗಲಿರುಳು ಶ್ರಮಿಸುತ್ತಿರುವ ನರೇಂದ್ರ ಮೋದಿಯನ್ನು ಬೆಂಬಲಿಸಬೇಕೋ ಎಂದು ನಿರ್ಧರಿಸಬೇಕು.

ಪ್ರತಿಷ್ಠಿತ ಮುಖ್ಯಮಂತ್ರಿ ಹುದ್ದೆಗಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ನಡುವಿನ ಆಂತರಿಕ ಕಚ್ಚಾಟದ ವಿಷಯದ ಬಗ್ಗೆ ಕೂಡ ಶಾ ಪ್ರಸ್ತಾಪಿಸಿದರು. ಕಾಂಗ್ರೆಸ್ ಪಕ್ಷಕ್ಕೆ ಮಹಿಳೆಯರ ಘನತೆಯ ಬಗ್ಗೆ ಯಾವುದೇ ಗೌರವವಿಲ್ಲ, ಇತ್ತೀಚಿನ ನೇಹಾ ಹಿರೇಮಠ್ ಪ್ರಕರಣದಲ್ಲಿ ಪಕ್ಷವು ಯಾವುದೇ ಕ್ರಮ ಕೈಗೊಂಡಿಲ್ಲ, ಮೇಲಾಗಿ ಅದು ವೈಯಕ್ತಿಕ ಕಾರಣಗಳಿಂದ ಸಂಭವಿಸಿದ ಸಾವು ಎಂದು ಪ್ರಕರಣದ ದಿಕ್ಕನ್ನು ತಪ್ಪಿಸುತ್ತಿದೆ. ರಾಜ್ಯದಲ್ಲಿ ಮಹಿಳೆಯರ ಸುರಕ್ಷತೆ ಮತ್ತು ಭದ್ರತೆ, ಕೇವಲ ಬಿಜೆಪಿ ಸರ್ಕಾರದಿಂದ ಮಾತ್ರ ಸಾಧ್ಯ.

ಕರ್ನಾಟಕದ ಅಭಿವೃದ್ಧಿಗಾಗಿ ಮೋದಿ ಸರ್ಕಾರ ಕೈಗೊಂಡಿರುವ ಅಪ್ರತಿಮ ಉಪಕ್ರಮಗಳು ಪ್ರಶಂಸನಾರ್ಹವಾಗಿವೆ. ಮೋದಿಯವರ ಅಧಿಕಾರಾವಧಿಯ ಮೊದಲು, ಕರ್ನಾಟಕವು ಕೇವಲ 25 ರಾಷ್ಟ್ರೀಯ ಹೆದ್ದಾರಿಗಳನ್ನು ಹೊಂದಿತ್ತು, ಈಗ ಈ ಸಂಖ್ಯೆ 47 ಕ್ಕೆ ತಲುಪಿ, ಸುಮಾರು ದ್ವಿಪಟ್ಟಾಗಿದೆ. 2004 ರಿಂದ 2014 ರವರೆಗೆ ಕಾಂಗ್ರೆಸ್ ಪಕ್ಷವು ಕರ್ನಾಟಕಕ್ಕೆ ಕೇವಲ ರೂ1.42 ಲಕ್ಷ ಕೋಟಿ ಮಂಜೂರು ಮಾಡಿತ್ತು, ಮತ್ತೊಂದೆಡೆ ನರೇಂದ್ರ ಮೋದಿ ಸರ್ಕಾರವು ಕಳೆದ ಹತ್ತು ವರ್ಷಗಳಲ್ಲಿ ಕರ್ನಾಟಕಕ್ಕಾಗಿ ರೂ4.98 ಲಕ್ಷ ಕೋಟಿಗಳನ್ನು ವಿನಿಯೋಗಿಸಿದೆ. ಖಂಡಿತವಾಗಿಯೂ, ಪ್ರಧಾನಿ ನರೇಂದ್ರ ಮೋದಿಯವರ ಅಮೋಘ ನಾಯಕತ್ವದಲ್ಲಿ ಕರ್ನಾಟಕದ ಜನರು ಬಿಜೆಪಿಯ ಕಾರ್ಯಕ್ಷಮತೆಯ ರಾಜಕೀಯಕ್ಕೆ ಮತ ಹಾಕಲಿದ್ದಾರೆ, ಇದರ ಪರಿಣಾಮವಾಗಿ 400 ಕ್ಕೂ ಹೆಚ್ಚು ಸ್ಥಾನಗಳೊಂದಿಗೆ ಭಾಜಪ ಅಭೂತಪೂರ್ವ ಗೆಲುವು ಸಾಧಿಸಲಿದೆ.

## ಸಿಎಂ ಸಿದ್ದರಾಮಯ್ಯ–ಡಿಸಿಎಂ ಡಿಕೆಶಿ ಇಂದು ಚಿಕ್ಕೋಡಿಗೆ

ಬೆಳಗಾವಿ: ಕಾಂಗ್ರೆಸ್ ಪಕ್ಷದ ಪ್ರಜಾಧ್ವನಿ–02 ಚುನಾವಣಾ ಪ್ರಚಾರ ಸಭೆ ಮೇ.4ರಂದು ಮಧ್ಯಾಹ್ನ 4:30ಕ್ಕೆ ಚಿಕ್ಕೋಡಿ ಆರ್ಡಿ. ಹೈಸ್ಕೂಲ್ ಮೈದಾನದಲ್ಲಿ ಜರುಗಲಿದ್ದು,ಈ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಆಗಮಿಸಲಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿದ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷಣರಾವ್ ಚಿಂಗಳೆ ಅವರು, 'ಅಂದು ಚಿಕ್ಕೋಡಿ ಲೋಕಸಭೆ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಪ್ರಚಾರಾರ್ಥ ನಡೆಯುವ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಸೇರಿದಂತೆ ಜಿಲ್ಲೆಯ ಎಲ್ಲ ಕಾಂಗ್ರೆಸ್ ಶಾಸಕರು ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಆದ್ದರಿಂದ ಚಿಕ್ಕೋಡಿ ಜಿಲ್ಲೆಯ ಜಿಲ್ಲಾ ವ್ಯಾಪ್ತಿಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಸಚಿವರು, ಮಾಜಿ ಶಾಸಕರು, ಮಾಜಿ ವಿಧಾನ ಪರಿಷತ್ ಸದಸ್ಯರು, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳು, ಕೆಪಿಸಿಸಿ ಸದಸ್ಯರು, ಜಿಲ್ಲಾ ಕಾಂಗ್ರೆಸ್ ಪಧಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪದಾಧಿಕಾರಿಗಳು, ನಗರಸಭೆ–ಪುರಸಭೆ, ಪಟ್ಟಣ ಪಂಚಾಯತ, ಜಿಲ್ಲಾ ಪಂಚಾಯತ, ತಾಲೂಕು ಪಂಚಾಯತ, ಗ್ರಾಪಂ ಹಾಲಿ ಹಾಗೂ ಮಾಜಿ ಅಧ್ಯಕ್ಷರು–ಉಪಾಧ್ಯಕ್ಷರು ಮತ್ತು ಸದಸ್ಯರು ಎಲ್ಲ ಮುಖಂಡರು ಸೇರಿದಂತೆ ಎಲ್ಲ ಕಾಂಗ್ರೆಸ್ ಕ್ರಾಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿರಬೇಕು ಎಂದು ತಿಳಿಸಿದ್ದಾರೆ.

## ಎರಡು ಕಾರುಗಳ ನಡುವೆ ಡಿಕ್ಕಿ: ಆರು ಮಂದಿ ಸಾವು

ಅಕೋಲಾ: ಮಹಾರಾಷ್ಟ್ರದ ಅಕೋಲಾ ಜಿಲ್ಲೆಯಲ್ಲಿ ಶುಕ್ರವಾರ ಎರಡು ಕಾರುಗಳ ನಡುವೆ ಅಪಘಾತ ಸಂಭವಿಸಿದ್ದು, ಇಬ್ಬರು ಮಕ್ಕಳು ಸೇರಿದಂತೆ ಆರು ಜನರು ಸಾವನ್ನಪ್ಪಿದ್ದಾರೆ ಮತ್ತು ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತರಲ್ಲಿ ಅಮರಾವತಿ ಶಿಕ್ಷಕರ ಕ್ಷೇತ್ರವನ್ನ ಪ್ರತಿನಿಧಿಸುವ ಎಂಎಲ್ಸಿ ಕಿರಣ್ ಸರ್ನಾಯಕ್ ಅವರ ಸಂಬಂಧಿಕರು ಸೇರಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪಾತೂರ್ ಘಾಟ್ ಬಳಿಯ ಅಕೋಲಾ–ವಾಶಿಮ್ ಹೆದ್ದಾರಿಯ ಫ್ಲೈಓವರ್ನಲ್ಲಿ ಮಧ್ಯಾಹ್ನ ಈ ಅಪಘಾತ ಸಂಭವಿಸಿದೆ.

## ಮೋದಿ ನೋಡಿ ಮತ ಹಾಕಿದರೆ ಕೈಗೆ ಖಾಲಿ ಚೊಂಬು ಖಚಿತ: ಡಾ. ನಿಂಬಾಳ್ಕರ್ ಕಿಡಿ

ಬೆಳಗಾವಿ: ಪ್ರಧಾನಿ ಮೋದಿ ನೋಡಿ ಮತ ಹಾಕಿದರೆ ಈ ಬಾರಿ ಕೈಗೆ ಖಾಲಿ ಚೊಂಬು ಸಿಗುತ್ತದೆ ಅಷ್ಟೆ ಎಂದು ಉತ್ತರಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಅಂಜಲಿ ನಿಂಬಾಳ್ಕರ್ ಕಿಡಿ ಕಾರಿದರು. ಕರೆನೀಡಿದರು.

ಕಾರವಾರದ ಅಮದಳ್ಳಿಯಲ್ಲಿ ಕಾಂಗ್ರೆಸ್ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಬಿಜೆಪಿಗರ ಸುಳ್ಳುಗಳು ಮಿತಿಮೀರಿದೆ. ನಿಮ್ಮ ಕಷ್ಟಕ್ಕಾಗುವವರಿಗೆ ಮತ ಹಾಕಿ. ಆರು ಬಾರಿ ಶಾಸಕರಾಗಿದ್ದ ಬಿಜೆಪಿ ಅಭ್ಯರ್ಥಿ ಕಾಗೇರಿಯವರದ್ದು ಏನು ಅನುಭವ ಎನ್ನುವುದು ಗೊತ್ತಾಗುತ್ತಿಲ್ಲ. ಸ್ಪೀಕರ್ ಆಗಿದ್ದರೂ ಜನಕ್ಕೆ ನ್ಯಾಯ ಕೊಡಿಸುವ ಕೆಲಸ ಮಾಡಿಲ್ಲ. ಹಳ್ಳಿ ಜನರ ಕಷ್ಟಗಳನ್ನ ಕೇಳುತ್ತಿದ್ದರೆ ಇದು ದೇಶದ ಚುನಾವಣೆ ಎಂದು ಬಿಜೆಪಿಗರು ಹೇಳುತ್ತಾರೆ. ಮೇ 7ರಂದು ಅವರಿಗೆ ತಿಳಿಸಬೇಕಿದೆ, ಹಳ್ಳಿಯಿಂದಲೇ ದೇಶ ನಡೆಯುವುದು ಎಂದು ಎಂದರು.

ತದನಂತರದಲ್ಲಿ ಶಾಸಕ ಸತೀಶ್ ಸೈಲ್

ಮಾತನಾಡಿ, 97% ಜನರಿಗೆ ಗ್ಯಾರಂಟಿ ಯೋಜನೆ ಮುಟ್ಟಿದೆ. ಬಿಜೆಪಿ ಜನ ಮಜ್ಜಿಗೆ, ಮೊಸರು ತಿನ್ನುವ ಬುದ್ಧಿವಂತರು. ಹೀಗಾಗಿ ಅವರು ಮೊದಲ ಸಾಲಿನಲ್ಲಿ ಅರ್ಜಿ ಸಲ್ಲಿಸಿ ಫಲಾನುಭವಿಯಾಗಿದ್ದಾರೆ. ಮರ್ಯಾದೆ ಇದ್ದರೆ ಅವರು ಗ್ಯಾರಂಟಿ ಯೋಜನೆಯನ್ನ ತಿರಸ್ಕರಿಸಬೇಕಿತ್ತು. ಎಲ್ಲಾ ಸೌಲಭ್ಯಗಳನ್ನ ಮೊದಲು ಪಡೆಯುವವರೇ ಅವರು. ಅವರದ್ದು ಹೂವಿನ ಪರಿಮಳ, ಹರಳು ಹುರಿದಂತೆ ಮಾತು ಬಿಟ್ಟರೆ ಬೇರೇನೂ ಇಲ್ಲ. ಅಚ್ಛೆ ದಿನ್ ಆಯೇಗಾ, ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಎಂದರು. ಆದರೆ ವಿಕಾಸ್ ಇಲ್ಲ, ಪಿಕಾಸ್ ಕೂಡ ಇಲ್ಲ. ಉಜ್ವಲ ಹೋಗಿ ಪ್ರಜ್ವಲ ಆಗಿದೆ ಎಂದು ವ್ಯಂಗ್ಯ ಮಾಡಿದರು.

ಹೂವನ್ನ ಕೀಳಲೂ ಕೈ ಬೇಕು. ಕೈಗಟ್ಟಿ ಇದ್ದರೆ ನಾವೆಲ್ಲ ಗಟ್ಟಿ, ಹೂವನ್ನ ಕಟ್ಟಿದಂತೆ ವಿರೋಧಿಗಳನ್ನ ಕಟ್ಟಿ ಹಾಕಿ ಡಾ. ಅಂಜಲಿ ಅವರಿಗೆ ವಿಜಯದ ಮಾಲೆ ಹಾಕುತ್ತೇವೆಂದು ಶಪಥ ಮಾಡೋಣ. ಅವರು ಹಿಂದುತ್ವ ಎನ್ನುತ್ತಾರೆ, ಹಾಗಿದ್ದರೆ ನಾವು ಹಿಂದುಗಳಲ್ಲವಾ? ಇಷ್ಟು ದಿನ ಹೀಗೆ ಹೇಳಿ ವೋಟನ್ನ ಲೂಟಿ ಮಾಡಿದರು. ಆದರೆ ಆ ಪರಿಸ್ಥಿತಿ ಈಗ ಬದಲಾಗಿದೆ. ಕಾಂಗ್ರೆಸ್ ಬಡವರ ಸರ್ಕಾರ. ಹಸಿವು ಮುಕ್ತ ಸಮಾಜ ನಿರ್ಮಾಣದ ಗುರಿ ಹೊಂದಿರುವ ಸರ್ಕಾರ ಎಂದರು.

ಈ ಸಂದರ್ಭದಲ್ಲಿ ಡಿಸಿಸಿ ವಕ್ತಾರ ಶಂಭು ಶೆಟ್ಟಿ . ಬ್ಲಾಕ್ ಅಧ್ಯಕ್ಷ ಸಮೀರ್ ನಾಯ್ಕ, ಪ್ರಮುಖರಾದ ಜಿ.ಪಿ.ನಾಯ್ಕ, ಗಣಪತಿ ಮಾಂಗ್ರೆ, ದೇವಾನಂದ ಚಂಡೇಕರ್, ಚಂದ್ರಕಾಂತ ಚಿಂಚಣಕರ್, ರಾಘು ನಾಯ್ಕ ಮುಂತಾದವರಿದ್ದರು.

## ಪ್ರಜ್ವಲ್ ರೇವಣ್ಣ ಯಾವುದೇ ದೇಶದಲ್ಲಿದ್ರೂ ಬಿಡಲ್ಲ: ಸಿಎಂ ಸಿದ್ದರಾಮಯ್ಯ

ಮುಂಡಗೋಡು: ಕೇಂದ್ರ ಸರ್ಕಾರ ಪ್ರಜ್ವಲ್ ರೇವಣ್ಣ ಅವರನ್ನು ರಕ್ಷ

## ಲೋಕಸಭಾ ಚುನಾವಣೆ–2024; ಮತದಾನ ದಿನ ನಿಯೋಜಿತ ಅಧಿಕಾರಿ ಸಿಬ್ಬಂದಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ

# ಬೇಜವಾಬ್ದಾರಿತನ, ಲೋಪಗಳು ಕಂಡುಬಂದಲ್ಲಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು: ರಾಹುಲ ಶಿಂಧೆ

ಚಿಕ್ಕೋಡಿ: ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಮೇ. 7 ರಂದು ಮತದಾನ ಜರುಗಲಿದೆ. ಮತದಾನಕ್ಕೆ ಸಂಬಂಧಿಸಿದಂತೆ ಅಂಕಿ ಅಂಶಗಳ ವರದಿಯನ್ನು ಕಾಲಮಿತಿಯೊಳಗೆ ಸಲ್ಲಿಸುವುದು ಅತೀ ಮುಖ್ಯವಾಗಿದ್ದು ಈ ಕುರಿತು ನಿಯೋಜಿತ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಚಿಕ್ಕೋಡಿ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ(ಮೇ.3) ರಂದು ಜರುಗಿದ ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮತದಾನದ ದಿನ ಮತದಾನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಂಕಿ ಅಂಶಗಳನ್ನು ಚುನಾವಣೆ ಆಯೋಗಕ್ಕೆ ನಿಗದಿತ ಸಮಯದೊಳಗಾಗಿ ಸಲ್ಲಿಸುವದು ಅತೀ ಅಗತ್ಯವಾಗಿರುತ್ತದೆ. ಈಗಾಗಲೇ ಅಂಕಿ ಅಂಶಗಳ ವರದಿ ಕ್ರೋಢಿಕರಣಕ್ಕಾಗಿ ನಿಯೋಜಿತ ಅಧಿಕಾರಿಗಳು ತಮ್ಮ ತಂಡಗಳೊಂದಿಗೆ ಆಯಾ ವಿಧಾನಸಭಾ ಮತಕ್ಷೇತ್ರದ ವರದಿಗಳನ್ನು ನಿಗದಿತ ಸಮಯದೊಳಗೆ ಸಲ್ಲಿಸಬೇಕು.

ನೋಡೆಲ್ ಅಧಿಕಾರಿಗಳು ವರದಿ ನೀಡುವಾಗ ಅತೀ ಜಾಗರೂಕತೆಯಿಂದ ಹಾಗೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ನಿಯೋಜಿತ ನೋಡೆಲ್ ಅಧಿಕಾರಿಗಳು ತಮ್ಮ ವಿಧಾನ ಸಭಾ ಕ್ಷೇತ್ರದ ಅಧಿಕಾರಿ ಹಾಗೂ ತಂಡಗಳೊಂದಿಗೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು. ಅಂಕಿ ಅಂಶಗಳ

ಕ್ರೋಢಿಕರಣದಲ್ಲಿ ತಮಗೆ ಬೇಕಾದ ಮಾಹಿತಿಯನ್ನು ಅಚ್ಚುಕಟ್ಟಾಗಿ, ವ್ಯವಸ್ಥಿತವಾಗಿ ಪಡೆದು ಕಾಲಮಿತಿಯೊಳಗೆ ಸಲ್ಲಿಸಬೇಕು. ಈ ಕಾರ್ಯದಲ್ಲಿ ಬೇಜವಾಬ್ದಾರಿತನ ತೋರುವ ಅಧಿಕಾರಿ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಚುನಾವಣೆಗೆ ಸಂಬಂಧಿಸಿದಂತೆ 48 ಗಂಟೆಗಳ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಮತದಾನದ ದಿನದಂದು ವಿಧ್ಯುತ ವ್ಯತವ್ಯಯವಾಗದಂತೆ ನಿಗಾವಹಿಸಲು ಹೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ವಿಧ್ಯುನ್ಮಾನ ಮತಯಂತ್ರಗಳಿರುವ ಸ್ಟ್ರಾಂಗ ರೂಂಗಳಿಗೆ ನಿರಂತರ ವಿಧ್ಯುತ ಸರಬರಾಜು ಆಗಬೇಕು. ಮತ ಏಣಿಕೆ ಪ್ರಕ್ರಿಯೆ ಪೂರ್ಣಗೊಳ್ಳುವ ವರೆಗೆ ಅಲ್ಲಿಯೇ ಸಿಬ್ಬಂದಿಗಳ ಖಾಯಂ ಆಗಿ ನಿಯೋಜಿಸುವಂತೆ ತಿಳಿಸಿದರು.

ಮತದಾನದ ದಿನದಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಎಲ್ಲ ಮತಗಟ್ಟೆಗಳಿಗೆ ಕಡ್ಡಾಯವಾಗಿ ಒಬ್ಬ ಆಶಾ ಕಾರ್ಯಕರ್ತರು ಅಗತ್ಯದ ಔಷಧಿಗಳೊಂದಿಗೆ ಹಾಜರಿರಬೇಕು. ಇದರ ಜೊತೆಗೆ ಮಸ್ಟರಿಂಗ ಹಾಗೂ ಡಿ ಮಸ್ಟರಿಂಗ ಕೇಂದ್ರಗಳಲ್ಲಿ ಅಗತ್ಯದ ಅಂಬ್ಯುಲೆನ್ಸ ವ್ಯವಸ್ಥೆ ಮಾಡಬೇಕು. ಮತಗಟ್ಟೆ ಅಧಿಕಾರಿ ಸಿಬ್ಬಂದಿಗಳಿಗೆ ಮತಗಟ್ಟೆಗಳಿಗೆ ತೆರಳಲು ಅಗತ್ಯದ ಬಸ ಸೌಲಭ್ಯಗಳನ್ನು ಒದಗಿಸಬೇಕು.

ಒಟ್ಟಾರೆಯಾಗಿ ಮತದಾನದ ದಿನದಂದು ಯಾವುದೇ ಲೋಪಗಳಿಗೆ ಆಸ್ಪದ ನೀಡದಂತೆ ತಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಅವರು ನೋಡೆಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಕಚೇರಿಯ ಸಹಾಯಕ ಚುನಾವಣಾಧಿಕಾರಿ ಬಸವರಾಜ ಅಡವಿಮಠ, ಜಿ.ಪಂ. ಯೋಜನಾ ನಿರ್ದೇಶಕ ಗಂಗಾಧರ ದಿವಟರ ಸೇರಿದಂತೆ ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳು ಹಾಜರಿದ್ದರು.

# 5ರಂದು ಬಸವ ಜಯಂತಿ; ಬೃಹತ್ ಬೈಕ್ ರ್‍ಯಾಲಿ

## ಮೂರು ದಿನ ಬಸವ ಜಯಂತಿ ಉತ್ಸವ, ವಿವಿಧ ಕಾರ್ಯಕ್ರಮ: ಜಿಲ್ಲಾಧ್ಯಕ್ಷೆ ರತ್ನಪ್ರಭಾ ಬೆಲ್ಲದ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಜಿಲ್ಲಾ ಘಟಕ ಹಾಗೂ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಉತ್ಸವ ಕೇಂದ್ರ ಸಮಿತಿ ಹಾಗೂ ವಿವಿಧ ಲಿಂಗಾಯತ ಸಂಘಟನೆಗಳ ವತಿಯಿಂದ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ನಿಮಿತ್ತವಾಗಿ ಮೇ.5 ರಂದು ಬೃಹತ್ ಬೈಕ್ ರ್‍ಯಾಲಿ ಆಯೋಜಿಸಲಾಗಿದೆ. ಸಹಸ್ರಾರು ಬಸವಾಭಿಮಾನಿಗಳು ಬೈಕ್ ರ್‍ಯಾಲಿಯಲ್ಲಿ ಪಾಲ್ಗೊಳಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾಧ್ಯಕ್ಷೆ ರತ್ನಪ್ರಭಾ ಬೆಲ್ಲದ ಹೇಳಿದರು.

ಇಲ್ಲಿನ ಕನ್ನಡ ಸಾಹಿತ್ಯ ಸಭನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಭಾನುವಾರ ಮೇ.5 ರಂದು ಶಿವಬಸವ ನಗರ ಲಿಂಗಾಯತ ಭವನದಿಂದ ಆರಂಭವಾಗುವ ಬೈಕ್ ರ್‍ಯಾಲಿಯ ಬಸವ ಪೂಜೆಯನ್ನು ಕಾರಂಜಿಮಠದ ಶ್ರೀ ಗುರುಸಿದ್ಧ ಮಹಾಸ್ವಾಮಿಗಳು ನೆರವೇರಿಸಲಿದ್ದಾರೆ. ಉದ್ಘಾಟನೆಯನ್ನು ಕೆಎಲ್ಇ

ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಅವರು ವಹಿಸಲಿದ್ದಾರೆ.

ಬೈಕ್ ರ್‍ಯಾಲಿ ಲಿಂಗಾಯತ ಭವನದಿಂದ ಆರಂಭವಾಗಿ ನಾಗನೂರು ಮಠ, ರಾಮದೇವ ಹೋಟೆಲ್, ಚನ್ನಮ್ಮ ವೃತ್ತ, ಗಣಪತಿ ಗಲ್ಲಿ, ಟಿಳಕಚೌಕ, ಕಪಿಲೇಶ್ವರ ಮೇಲಸೇತುವೆ ಶಿವಾಜಿ ಮಹಾರಾಜ ಉಧ್ಯಾನವನ ಶಹಾಪೂರ, ಬಸವೇಶ್ವರ ಸರ್ಕಲ್ ಮಾರ್ಗವಾಗಿ ಬಸವೇಶ್ವರ ವೃತ್ತದವರೆಗೆ ನಡೆಯಲಿದೆ ಎಂದು ಹೇಳಿದರು.

**8 ರಿಂದ 10 ವರೆಗೆ ಬಸವ ಜಯಂತಿ ವಿವಿಧ ಕಾರ್ಯಕ್ರಮ:**

ಇದೇ ಬುಧವಾರ 8 ರಿಂದ 10 ರವಗೂ 3 ದಿನಗಳ ಜಗಜ್ಯೋತಿ ಬಸವೇಶ್ವರ ಜಯಂತಿ ನಿಮಿತ್ತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಶ್ರೀ ಬಸವೇಶ್ವರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಗುವುದು. ಶ್ರೀ ಬಸವೇಶ್ವರ (ಗೋವಾವೇಸ್) ವೃತ್ತದಲ್ಲಿ ಬುಧವಾರ 8 ರಂದು ಬೆಳಿಗ್ಗೆ 10 ಗಂಟೆಗೆ ಷಟಸ್ಥಲ ಧ್ವಜಾರೋಹಣ ಮತ್ತು ಬಸವೇಶ್ವರ ಮೂರ್ತಿ ಪೂಜೆ, ಉದ್ಘಾಟನೆ ಕಾರ್ಯಕ್ರಮ ಜರುಗಲಿದೆ. ಕಾರಂಜಿಮಠ ಶ್ರೀ ಗುರುಸಿದ್ಧ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಕೆಎಲ್ಇ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಗೌರವ ಅತಿಥಿಗಳಾಗಿ ಜಿಲ್ಲಾಧ್ಯಕ್ಷೆ ರತ್ನಪ್ರಭಾ ಬೆಲ್ಲದ, ಶ್ರೀ ಮಲ್ಲಿಕಾರ್ಜುನ ವಿದ್ಯಾಪೀಠ ಅಧ್ಯಕ್ಷರಾದ ಗುರನಗೌಡ ಎಮ್ ಪಾಟೀಲ ಸೇರಿದಂತೆ ಇತರರು, ಅಧ್ಯಕ್ಷತೆಯನ್ನು ಶರಣ ಗುರದೇವ ನಿಂ. ಪಾಟೀಲ ವಹಿಸಲಿದ್ದಾರೆ.

ಅಕ್ಕನ ಬಳಗ ಶಹಾಪೂರ ಹಾಗೂ ಉಮಾ ನಿಜಗುಲಿ ಇವರಿಂದ ಸಂಗೀತ ಕಾರ್ಯಕ್ರಮ, ಹಾಗೂ ಪ್ರಬಂದ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು ವಿಜೇತರಿಗೆ 25 ಸಾವಿರ ನಗದು ಬಹುಮಾನ ವಿತರಣೆ ಮಾಡಲಾಗುವುದು ಎಂದು ಹೇಳಿದರು.

ಅಂದೇ ಸಂಜೆ ಮಾಸಿಕ ಅಮವಾಸ್ಯೆ ಅನುಭಾವ ಗೋಷ್ಠಿ ಪ್ರಯುಕ್ತ ಸತ್ಯಂಗ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಗುರುವಾರ 9 ರಂದು ಲಿಂಗಾಯತ ಭವನದಲ್ಲಿ ಬೆಳಿಗ್ಗೆ 10.30 ಕ್ಕೆ ವಚನ ನೃತ್ಯ ಸ್ಪರ್ಧೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಜಯಶೀಲಾ ಬ್ಯಾಕೋಡ್ ಅವರು ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆ ರಕ್ಷಾ ದೇಗಿನಾಳ ವಹಿಸಲಿದ್ದಾರೆ. ಬಸವಣ್ಣ ; ಶರಣೆಯರು ಕಂಡಂತೆ ವಿಷಯದ ಮೇಲೆ ಸಂಜೆ 4.30 ಕ್ಕೆ ಮಹಿಳಾ ಗೋಷ್ಠಿ ನಡೆಯಲಿದೆ. ಡಾ.ಗುರುದೇವಿ ಹುಲೆಪ್ಪನವರಮಠ ಗೌರವ ಅತಿಥಿಗಳಾಗಿ ವಹಿಸಲಿದ್ದಾರೆ. ಸಾಂಸ್ಕೃತಿಕ ಕಾರ್ಯಕ್ರಮ, ವಚನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಶುಕ್ರವಾರ 10 ರಂದು ಸಂಜೆ 4 ಗಂಟೆಗೆ ರಾಣಿ ಚನ್ನಮ್ಮ ವೃತ್ತದಿಂದ ಭವ್ಯ ಮೆರವಣಿಗೆ ಜರುಗಲಿದ್ದು, ಬಸವ ಪೂಜೆಯನ್ನು ಕಾರಂಜಿಮಠದ ಶ್ರೀ ಗುರುಸಿದ್ಧ ಮಹಾಸ್ವಾಮಿಗಳು ನೆರವೇರಿಸಲಿದ್ದಾರೆ.

ಪೂಜ್ಯ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಉತ್ಸವ ಅಧ್ಯಕ್ಷ ಗುರುದೇವ ಪಾಟೀಲ, ಕೋಶಾಧ್ಯಕ್ಷರು ಬಾಲಚಂದ್ರ ಬಾಗಿ, ಉಪಾಧ್ಯಕ್ಷರಾದ ಪ್ರಸಾದ ಹಿರೇಮಠ, ವೀಣಾ ನಾಗಮೋತಿ, ರಕ್ಷಾ ದೇಗಿನಾಳ, ಸುಜೀತ ಮುಳಗುಂದ, ಕಾರ್ಯದರ್ಶಿ ವಿರೇಶ ಅಪ್ಪಯ್ಯನವರಮಠ ಹಾಗೂ ಇತರರು ಇದ್ದರು.

## ಪ್ರತಿಯೊಬ್ಬರು ವಿವೇಚನೆಯಿಂದ ಮತ ಚಲಾಯಿಸಿ: ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ

ಬಳ್ಳಾರಿ: ಮೇ 07 ರಂದು ನಡೆಯುವ ಲೋಕಸಭೆ ಚುನಾವಣೆಗೆ ಪ್ರತಿಯೊಬ್ಬರೂ ವಿವೇಚನೆಯಿಂದ ಮತ ಚಲಾಯಿಸಿ, ಉತ್ತಮ ನಾಯಕರನ್ನು ಆಯ್ಕೆ ಮಾಡಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಆದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಬಳ್ಳಾರಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಇವರ ಆಶ್ರಯದಲ್ಲಿ ಹಲಕುಂದಿ ಗ್ರಾಮದ ಮನರೇಗಾ ಕಾರ್ಮಿಕರಿಗೆ ಶುಕ್ರವಾರ ಏರ್ಪಡಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮತದಾನ ಪ್ರತಿಯೊಬ್ಬ ಪ್ರಜೆಯ ಮೂಲ ಹಕ್ಕು. ಉತ್ತಮ ನಾಯಕನ ಆಯ್ಕೆ ಪ್ರತಿಯೊಬ್ಬ ಮತದಾರನ ಆದ್ಯ ಕರ್ತವ್ಯ. ನಿಮ್ಮ ಅಮೂಲ್ಯವಾದ ಮತವನ್ನು ಯಾವುದೇ ಆಸೆ–ಆಮಿಷಗಳಿಗೆ ಒಳಗಾಗಿ ಮಾರಿಕೊಳ್ಳಬೇಡಿ ಎಂದರು.

ಚುನಾವಣಾ ಹಬ್ಬವು, ಎಲ್ಲರ ಮನೆಯ ಹಬ್ಬವಿದ್ದಂತೆ. ಪ್ರತಿಯೊಬ್ಬರೂ ಪಾಲ್ಗೊಂಡು ಮತದಾನ ಮಾಡುವ ಮೂಲಕ ಶೇಕಡವಾರು ಮತದಾನ ಪ್ರಮಾಣ ಹೆಚ್ಚಳಕ್ಕೆ ಸಹಕರಿಸಬೇಕು ಎಂದು ಕರೆ ನೀಡಿದರು.

ಮೇ 7 ರಂದು ನಡೆಯುವ ಮತದಾನ ದಿನದಂದು ಜಿಲ್ಲೆಯ ಎಲ್ಲಾ ಮತದಾನ ಕೇಂದ್ರಗಳಲ್ಲಿ ನೆರಳು, ಕುಡಿಯವ ನೀರು, ಶೌಚಾಲಯಗಳು ವ್ಯವಸ್ಥೆ ಹಾಗೂ ವಿಶೇಷವಾಗಿ ವೃದ್ದರು, ಅಂಗವಿಕಲರು ಹಾಗೂ ಗರ್ಭಿಣಿಯರಿಗೆ ವಿಶೇಷ ಲೈನ್ ವ್ಯವಸ್ಥೆ ಮಾಡಲಾಗಿದ್ದು, ಇದರ ಸದ್ವಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಮತದಾನ ದಿನದಂದು ಬಿಸಿಲು ಹೆಚ್ಚಿರುವುದರಿಂದ ಆದಷ್ಟು ಬೆಳಗಿನ ಅವಧಿಯಲ್ಲಿಯೇ ಮತದಾನ ಮಾಡಬೇಕು ಎಂದರು.

## ಬೆಂಗಳೂರಲ್ಲಿ ಗುಡುಗು, ಸಿಡಿಲಿನ ಅಬ್ಬರ; ಉದ್ಯಾನನಗರಿ ಫುಲ್ ಕೂಲ್

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ಇವತ್ತು ಮತ್ತೆ ಭರ್ಜರಿ ಮಳೆಯಾಗಿದೆ. ಬಿಸಿಲಿಗೆ ಬೆಂದು ಬಸವಳಿದಿದ್ದ ಬೆಂಗಳೂರಿಗರು ದಿಢೀರ್ ಮಳೆ ನೋಡಿ ಫುಲ್ ಖುಷಿಯಾಗಿದ್ದಾರೆ. ಉಯ್ಯೋ ಉಯ್ಯೋ ಮಳೆರಾಯ ಎನ್ನುತ್ತಿರುವ ಸಿಲಿಕಾನ್ ಸಿಟಿ ಮಂದಿ ಹೀಗೆ ಹೆಚ್ಚು ಮಳೆ ಸುರಿಯಲಿ ಎಂದು ಬೇಡಿಕೊಳ್ಳುತ್ತಿದ್ದಾರೆ.

ನಿನ್ನೆ ಸಂಜೆಯು ಬೆಂಗಳೂರಿನ ಹಲವೆಡೆ ತುಂತುರು ಮಳೆಯಾಗಿತ್ತು. ಇಂದು ಬೆಂಗಳೂರು ನಗರದ ಹಲವಡೆ ಗುಡುಗು, ಸಿಡಿಲು ಸಹಿತ ಮಳೆಯಾಗಿದ್ದು, ಬಿಸಿಲ ಬೇಗೆಗೆ ತತ್ತರಿಸಿದ ಉದ್ಯಾನನಗರಿ ಫುಲ್ ಕೂಲ್ ಆಗಿದೆ. ಬೆಂಗಳೂರು ಉತ್ತರ, ದಕ್ಷಿಣ ಭಾಗದ ಹಲವೆಡೆ ತುಂತುರು ಮಳೆಯಾಗಿದೆ.

ಮಧ್ಯಾಹ್ನವೇ ಆರಂಭವಾಗಿರುವ ಭರ್ಜರಿ ಮಳೆಯಿಂದ ಮೆಜೆಸ್ಟಿಕ್, ರಾಜಾಜಿನಗರ, ಮಲ್ಲೇಶ್ವರಂ, ರೇಸ್ ಕೋರ್ಸ್ ಸೇರಿ ಹಲವೆಡೆ ಮಳೆ ಸುರಿದಿದೆ. ಈ ಭಾಗದಲ್ಲಿ ಮಳೆಯಿಂದಾಗಿ ಟ್ರಾಫಿಕ್ ಜಾಮ್ ಉಂಟಾಗಿದೆ. ಇನ್ನು ಮೋಡ ಕವಿದ ವಾತಾವರಣ ಮುಂದುವರಿದಿದ್ದು ರಾತ್ರಿ ಕೂಡ ಭರ್ಜರಿ ಮಳೆಯಾಗುವ ಸಾಧ್ಯತೆ ಇದೆ.

# ನಮಗೆ ಅನ್ಯಾಯ ಮಾಡಿದವರೇ ನಮ್ಮ ಮತ ಕೇಳಲು ಬಂದಿದ್ದಾರೆ : ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಇಷ್ಟು ವರ್ಷಗಳ ಕಾಲ ಬೆಳಗಾವಿಗೆ ಯಾರಿಂದ ಅನ್ಯಾಯವಾಗುತ್ತಿದೆ ಎಂದು ನಾವು ಹೋರಾಟ ಮಾಡುತ್ತ ಬಂದಿದ್ದೇವೋ ಅವರೇ ಇಂದು ನಾಚಿಕೆ ಬಿಟ್ಟು ನಮ್ಮಿಂದಲೇ ಮತ ಕೇಳಲು ಬರುತ್ತಿದ್ದಾರೆ. ಅಂತವರನ್ನು ಮುಲಾಜಿಲ್ಲದೆ ತಿರಸ್ಕರಿಸುವ ಮೂಲಕ ನಮಗೆ ದ್ರೋಹ ಮಾಡುವವರಿಗೆ ಇಲ್ಲಿ ಜಾಗವಿಲ್ಲ ಎನ್ನುವ ಸ್ಪಷ್ಟ ಸಂದೇಶ ನೀಡೋಣ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದ್ದಾರೆ.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಮಾರುತಿ ನಗರ ಮತ್ತು ಮಹಾವೀರ ಕಾಲೋನಿಯಲ್ಲಿ ಲೋಕಸಭೆ ಚುನಾವಣೆಯ ಪ್ರಚಾರ ಕೈಗೊಂಡು, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಅವರನ್ನು ಬೆಂಬಲಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿ

ಮಾತನಾಡಿದರು.

ಅಧಿಕಾರ ಸಿಕ್ಕಿದಾಗ ಬೆಳಗಾವಿಗೆ ಸೌಲಭ್ಯಗಳನ್ನು ನೀಡುವ ಬದಲು ಇಲ್ಲಿಂದ ಕಚೇರಿಗಳನ್ನು, ಯೋಜನೆಗಳನ್ನು ಹುಬ್ಬಳ್ಳಿ – ಧಾರವಾಡಕ್ಕೆ ತೆಗೆದುಕೊಂಡು ಹೋಗಲು ಕಾಯುತ್ತ ಕುಳಿತಿರುತ್ತಿದ್ದ ವ್ಯಕ್ತಿ ಇಂದು ಬೆಳಗಾವಿ ಜನರ ಸಹಾಯ ಕೇಳಲು ಬಂದಿದ್ದಾರೆ. ನಾವು ಸ್ವಾಭಿಮಾನಿಗಳು, ನಿಮ್ಮ ಅನ್ಯಾಯವನ್ನು ಮರೆತಿಲ್ಲ, ಎಂದಿಗೂ ಮರೆಯಲೂ ಸಾಧ್ಯವಿಲ್ಲ. ನಿಮಗೆ ಇಲ್ಲಿ ಜಾಗವಿಲ್ಲ ಎಂದು ಅವರನ್ನು ವಾಪಸ್ ಕಳಿಸೋಣ ಎಂದು ಚನ್ನರಾಜ ಹಟ್ಟಿಹೊಳಿ ಕರೆ ನೀಡಿದರು.

ಕೈಮುಗಿದು ಕೇಳುತ್ತೇನೆ, ದಯವಿಟ್ಟು ಈ ಬಾರಿ ಬೆಳಗಾವಿ ಜನರು ಮೈ ಮರೆಯದೇ ಬೆಳಗಾವಿ ಅಭಿವೃದ್ಧಿಯ ಬದ್ಧತೆ ಮೆರೆಯೋಣ. ಬೆಳಗಾವಿಗೆ ದ್ರೋಹ ಬಗೆದವರ ಕೈಗೆ ಅಧಿಕಾರ ಕೊಡುವುದು ಬೇಡ.

ಹಾಗೆ ಕೊಟ್ಟಲ್ಲಿ ಇನ್ನೆಂತಹ ಅನ್ಯಾಯವಾಗಬಹುದು ಎನ್ನುವುದನ್ನು ಯೋಚಿಸಿ, ಸ್ಥಳೀಯ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡಿ ಆಯ್ಕೆ ಮಾಡೋಣ ಎಂದು ವಿನಂತಿಸಿದರು.

ಮೃಣಾಲ ಹೆಬ್ಬಾಳಕರ ಯುವಕನಿದ್ದು, ವಿದ್ಯಾವಂತನಿದ್ದಾನೆ.

ಜಿಲ್ಲೆಯ ಅಭಿವೃದ್ಧಿಯ ಕಳಕಳಿ ಹೊಂದಿದ್ದಾನೆ. ಅವನಿಗೆ ಮತ ನೀಡಿ ಆಯ್ಕೆ ಮಾಡುವ ಮೂಲಕ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅವಕಾಶ ಮಾಡಿಕೊಡೋಣ. ಅವರು ಸದಾ ಇಲ್ಲೇ ಇದ್ದು, ನಿಮ್ಮ ಕಷ್ಟ ಸುಖದಲ್ಲಿ ಭಾಗಿಯಾಗಲಿದ್ದಾನೆ ಎಂದು ಹೇಳಿದರು.

ಈ ಸಮಯದಲ್ಲಿ ಶಾಸಕರಾದ ಆಸೀಫ್ ಸೇಠ್, ಮೃಣಾಲ ಹೆಬ್ಬಾಳಕರ್ ಕ್ರಿಯಾಶೀಲ ಯುವಕನಿದ್ದು, ಉತ್ತಮ ರೀತಯಲ್ಲಿ ಕೆಲಸ ಮಾಡಲಿದ್ದಾನೆ. ಹಾಗಾಗಿ ಹೊರಗಿನ ವ್ಯಕ್ತಿಗೆ ಮತ ನೀಡದೆ ಜಿಲ್ಲೆಯ ಯುವಕನಿಗೆ ಮತ ಹಾಕಿ ಗೆಲ್ಲಿಸೋಣ. ಕನಿಷ್ಟ 3 ಲಕ್ಷ ಮತಗಳ ಅಂತರದಿಂದ ಗೆಲ್ಲಿಸೋಣ ಎಂದರು.

ಫಹೀಮ್ ನಾಯಿಕವಾಡಿ, ಸೀಮಾ ಪವಾರ್, ಹಸೀನಾ, ಮಹಾಂತೇಶ ಹವಳಿ, ಉದಯ ಪಟವನ್ನವರ ಕಲಿಕಟ್ಟಿ ಸರ್, ಕಲಿಕಟ್ಟಿ ಮೆಡಮ್, ಪದ್ಮಾ ಅನಿಗೋಳ, ಬಾಬು ಮಿಸಕಿ ಹಾಗೂ ಪಕ್ಷದ ಕಾರ್ಯಕರ್ತರು ಇದ್ದರು.

# ಫ್ಲೈಯಿಂ

## ಪ.ಪೂ.ಶ್ರೀ.108 ಅಮರಕೀರ್ತಿ ಮುನಿಗಳ 50 ನೇ ಜನ್ಮ ಜಯಂತಿ ಆಚರಣೆ

ಬೆಳಗಾವಿ: ಯುಗಲ ಮುನಿಗಳು ಎಂದೇ ಪ್ರಸಿದ್ಧಿ ಪಡೆದು ಕರ್ನಾಟಕದ ನಾಡಿನಾದ್ಯಂತ ವಿಹಾರ ನಡೆಸುತ್ತ ಇತ್ತಿಚಿಗೆ ಬೆಳಗಾವಿಗೆ ಆಗಮಿಸಿದ ಪ.ಪೂ.ಶ್ರೀ. 108 ಅಮರಕೀರ್ತಿ ಹಾಗೂ ಪ.ಪೂ.ಶ್ರೀ.108 ಅಮೋಘಕೀರ್ತಿ ಮುನಿಗಳನ್ನು ಬೆಳಗಾವಿ ನಗರದಲ್ಲಿ ಭವ್ಯವಾಗಿ ಸ್ವಾಗತಿಸಲಾಯಿತು.

ಕಳೆದ ಡಿಸೆಂಬರ ತಿಂಗಳಿನಲ್ಲಿ ವೇಣುರನಲ್ಲಿ ನಡೆದ ಭಗವಾನ ಬಾಹುಬಲಿ ಮಸ್ತಕಾಭಿಷೇಕದ ಕಾರ್ಯಕ್ರಮವನ್ನು ಮುಗಿಸಿಕೊಂಡು ವಿಹಾರ ಮಾಡುತ್ತ ಇದಿಗ ಈ ಯುಗಲ ಮುನಿಗಳು ಬೆಳಗಾವಿಗೆ ಆಗಮಿಸಿದ್ದಾರೆ. ಬೆಳಗಾವಿಯ ಅನಿಗೋಳ,ಹಿಂದವಾಡಿ ಕೋರೆಗಲ್ಲಿಯ ಬಸದಿಗಳಿಗೆ ಮುನಿಗಳು ಭೇಟಿ ನೀಡಿದ್ದಾರೆ.

ಇದೇ ಸಂದರ್ಭದಲ್ಲಿ ಪ.ಪೂ.ಶ್ರೀ.108 ಅಮರಕೀರ್ತಿ ಮುನಿಗಳ 50 ನೇ ಜನ್ಮ ಜಯಂತಿ ಆಚರಣೆಯನ್ನು ಮೇ 5 ರಂದು ಮಧ್ಯಾಹ್ನ 2 ಗಂಟೆಗೆ ಬೆಳಗಾವಿಯ ಧರ್ಮನಾಥ ಭವನದಲ್ಲಿ ನಡೆಸಲು ಸಮಾಜದ ವತಿಯಿಂದ ನಿರ್ಣಯಿಸಲಾಗಿದೆ. ಈ ಸಮಾರಂಭದ ಸಾನಿಧ್ಯವನ್ನು ಪ.ಪೂ.ಶ್ರೀ. 108 ಅಮೋಘಕೀರ್ತಿ ಮುನಿಗಳು ಸಾನಿಧ್ಯವನ್ನು ವಹಿಸಲಿದ್ದಾರೆ.

ಈ ಸಮಾರಂಭಕ್ಕೆ ಬೆಳಗಾವಿಯ ಸಮಸ್ತ ಜೈನ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದು, ಕಾರ್ಯಕ್ರಮಕ್ಕೆ ಶೋಭೆ ತರಬೇಕೆಂದು ಆಯೋಜಕರು ಕೋರಿದ್ದಾರೆ.

## ಬರ ನಿರ್ವಹಣೆಗಾಗಿ ಜಿಲ್ಲಾ/ತಾಲೂಕು ಕೇಂದ್ರಗಳಲ್ಲಿ ಕಾಲ್ ಸೆಂಟರ್ ಆರಂಭ

ಬೆಳಗಾವಿ: ಪಶು ಸಂಗೋಪನಾ ಇಲಾಖೆಯಿಂದ 2023–24 ನೇ ಸಾಲಿನಲ್ಲಿ ಬರ ನಿರ್ವಹಣೆಗಾಗಿ ಜಿಲ್ಲಾ/ ತಾಲೂಕು ಪಶು ಕೇಂದ್ರಗಳಲ್ಲಿ ಕಾಲ್ ಸೆಂಟರ್ ತೆರೆದು ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ.

ಬೆಳಗಾವಿ ಜಿಲ್ಲೆಯ ಎಲ್ಲಾ ತಾಲೂಕುಗಳನ್ನು ಬರ ಪೀಡಿತ ತಾಲೂಕುಗಳು ಎಂದು ಘೋಷಿಸಿದ ಹಿನ್ನೆಲೆಯಲ್ಲಿ ಜಾನುವಾರುಗಳ ಮೇವು ಹಾಗೂ ನೀರಿನ ಅಭಾವ ಕುರಿತು ಮೇಲ್ವಿಚಾರಣೆ ಕೈಗೊಳ್ಳಲು ಪ್ರತಿ ತಾಲೂಕಿಗೆ ಒಬ್ಬರಂತೆ ಪಶುಸಂಗೋಪನೆ ಇಲಾಖೆಯಿಂದ ಅಧಿಕಾರಿ ಸಿಬ್ಬಂದಿಗಳನ್ನು ಉಸ್ತುವಾರಿ ಅಧಿಕಾರಿಗಳು ಎಂದು ನೇಮಕ ಮಾಡಿಲಾಗಿದೆ.

ಬೆಳಗಾವಿ ಡಾ. ಹೆಚ್.ಕೆ.ಯರಗಟ್ಟಿ 9632617400, ಪ್ರದೀಪ ವಾಡೇಕರ 7411115259, ಅಥಣಿ ಎಸ್.ಬಿ.ಚೌಗುಲೆ 9845902638, ಕಾಗವಾಡ ಸಿದ್ದೋಭಾ ಶಿಂಧೆ 9449375956, ಬೈಲಹೊಂಗಲ ಡಾ.ವಿರುಪಾಕ್ಷಿ ಅಡ್ಡಣಗಿ 9964505534, ಕಿತ್ತೂರ ಎ.ಹೆಚ್. ಪಿರಜಾದೆ 8660205235, ಬೆಳಗಾವಿ ಡಾ.ಮೊಹಮ್ಮದ ರೆಹಮತುಲ್ಲಾ 9242318004, 8312950409, ಚಿಕ್ಕೊಡಿ ಡಾ.ಅರುಣ ಸಂಗ್ರೋಳ್ಳಿ 9448907744, ನಿಪ್ಪಾಣಿ ಡಾ.ಪ್ರಶಾಂತ ಉದಗಟ್ಟಿ 9900367215, ಗೋಕಾಕ ಡಾ.ಶಶಿಕಾಂತ ಕೌಜಲಗಿ 9449464974, ಮೂಡಲಗಿ ಎಸ್.ಪಿ.ಆದಪ್ಪಗೋಳ 9740635960, ಹುಕ್ಕೇರಿ ಡಾ.ಪಿ.ಕೆ.ಕೊರ್ತಿ 9902686532/08333265063, ಖಾನಾಪೂರ ಭೀಮಪ್ಪಾ ಪುಡಭಂಗಿ 9663249671, ರಾಯಭಾಗ ಡಾ.ಎಂ.ಬಿ.ಪಾಟೀಲ 9448420399, ರಾಮದುರ್ಗ ಡಾ.ಹೆಚ್.ಎಸ್.ರಾಠೋಡ 9741998321, ಸವದತ್ತಿ ಬಾಲಚಂದ್ರ ಪಾಟೀಲ 9916713730/ 08330295072, ಯರಗಟ್ಟಿ ಎಂ.ಬಿ. ಪಾಶ್ಚಾಪೂರ 9731973211 ಸಂಖ್ಯೆಗೆ ಸಾರ್ವಜನಿಕರು ರೈತರು ತಮ್ಮ ಅಹವಾಲುಗಳನ್ನು ಸಲ್ಲಿಸಲು ತಮ್ಮ ತಾಲೂಕು ಕೇಂದ್ರಗಳಿಗೆ ಸಂಪರ್ಕಿಸಬಹುದು ಎಂದು ಪಶುಪಾಲನೆ ಮತ್ತು ಪಶುವೈದ್ಯಕೀಯ ಇಲಾಖೆಯ ಉಪ ನಿರ್ದೇಶಕ ಡಾ.ರಾಜೀವ ಕೂಲೇರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಡೆಜೆನ್ ಲಿಮಿಟೆಡ್‌ನ ಆರಂಭಿಕ ಸಾರ್ವಜನಿಕ ಕೊಡುಗೆ

ಬೆಂಗಳೂರು: ಇಂಡೆಜೆನ್ ಲಿಮಿಟೆಡ್ ತನ್ನ ಆರಂಭಿಕ ಸಾರ್ವಜನಿಕ ಕೊಡುಗೆಯನ್ನು (ಐಪಿಒ) 2024ರ ಮೇ 6, ಸೋಮವಾರ ಹೂಡಿಕೆದಾರರಿಗೆ ತೆರೆಯಲು ಉದ್ದೇಶಿಸಿದೆ. ಬಿಡ್ / ಕೊಡುಗೆ ಮುಕ್ತಾಯ ದಿನಾಂಕ 2024ರ ಮೇ 8, ಬುಧವಾರ ಇರಲಿದೆ.

ಕೊಡುಗೆಯ ಬೆಲೆ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ ?430 ರಿಂದ ರೂ 452 ಕ್ಕೆ ನಿಗದಿಪಡಿಸಲಾಗಿದೆ. ಕನಿಷ್ಠ 33 ಈಕ್ವಿಟಿ ಷೇರುಗಳಿಗೆ ಮತ್ತು ನಂತರದ 33 ಈಕ್ವಿಟಿ ಷೇರುಗಳ ಗುಣಕಗಳಲ್ಲಿ ಬಿಡ್‌ಗಳನ್ನು ಮಾಡಬಹುದು.

ಈ ಕೊಡುಗೆಯು ಒಟ್ಟಾರೆ ರೂ 7,600 ದಶಲಕ್ಷವರೆಗೆ ಈಕ್ವಿಟಿ ಷೇರುಗಳ ಹೊಸ ನೀಡಿಕೆ ಒಳಗೊಂಡಿದೆ. 23,932,732 ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆಯು ಮನೀಶ್ ಗುಪ್ತಾ ಅವರ 1,118,596 ಈಕ್ವಿಟಿ ಷೇರುಗಳು, ಡಾ. ರಾಜೇಶ್ ಭಾಸ್ಕರನ್ ನಾಯರ್ ಅವರಿಂದ 3,233,818 ವರೆಗೆ ಈಕ್ವಿಟಿ ಷೇರುಗಳು, ಅನಿತಾ ನಾಯರ್ ಅವರಿಂದ 1,151,454 ವರೆಗಿನ ಈಕ್ವಿಟಿ ಷೇರುಗಳು ಇರಲಿವೆ. (ಮನೀಶ್ ಗುಪ್ತಾ ಮತ್ತು ಡಾ. ರಾಜೇಶ್ ಭಾಸ್ಕರನ್ ನಾಯರ್ ಅವರ ಒಟ್ಟಾರೆ 3,600,000 ವರೆಗಿನ ಷೇರುಗಳನ್ನು, ಗ್ರೂಪ್ ಲೈಫ್ ಸ್ಪ್ರಿಂಗ್‌ನ ಪಾಲುದಾರಿಕೆಯ ಸಾಮರ್ಥ್ಯದಲ್ಲಿ ವಿಡಾ ಟ್ರಸ್ಟೀಸ್ ಪ್ರೈವೇಟ್ ಲಿಮಿಟೆಡ್ (ಟ್ರಸ್ಟೀ ಆಫ್ ಫಿಗ್ ಟ್ರೀ ಟ್ರಸ್ಟ್) ಒಟ್ಟುಗೂಡಿಸಲಿದೆ.

ಬಿಪಿಸಿ ಜೆನೆಸಿಸ್ ಫಂಡ್ ಐ–ಎ ಎಸ್‌ಪಿವಿಯ 2,657,687ವರೆಗಿನ ಷೇರುಗಳನ್ನು ಒಟ್ಟುಗೂಡಿಸಲಿದೆ. 1,378,527 ವರೆಗಿನ ಈಕ್ವಿಟಿ ಷೇರುಗಳನ್ನು ಬಿಪಿಸಿ ಜೆನೆಸಿಸ್ ಫಂಡ್ ಐ ಎಸ್‌ಪಿವಿ ಲಿಮಿಟೆಡ್ ಒಟ್ಟುಗೂಡಿಸಲಿದೆ. ಸಿಎ ಡಾನ್ ಇನ್ವೆಸ್ಟ್‌ಮೆಂಟ್‌ನಿಂದ 10,792,650 ವರೆಗೆ ಈಕ್ವಿಟಿ ಷೇರುಗಳನ್ನು ಒಟ್ಟುಗೂಡಿಸಲಾಗುವುದು.

ವಿಡಾ ಟ್ರಸ್ಟೀ ಪ್ರೈವೇಟ್ ಲಿಮಿಟೆಡ್, ಬಿಪಿಸಿ ಜೆನೆಸಿಸ್ ಫಂಡ್ ಐ ಎಸ್‌ಪಿವಿ ಲಿಮಿಟೆಡ್ ಮತ್ತು ಬಿಪಿಸಿ ಜೆನೆಸಿಸ್ ಫಂಡ್ ಐ–ಎ ಎಸ್‌ಪಿವಿ ಲಿಮಿಟೆಡ್, 'ಹೂಡಿಕೆ ಮಾರಾಟ ಮಾಡುವ ಷೇರುದಾರರು' ಮತ್ತು ಒಟ್ಟಾರೆಯಾಗಿ ವೈಯಕ್ತಿಕ ಮಾರಾಟದ ಷೇರುದಾರರು, 'ಮಾರಾಟ ಷೇರುದಾರರು' ಮತ್ತು ಅಂತಹ ಈಕ್ವಿಟಿ ಷೇರುಗಳು, "ಕೊಡುಗೆ ಮಾಡಿದ ಷೇರುಗಳು") ಒಳಗೊಂಡಿರಲಿದೆ.

ಅರ್ಹ ಉದ್ಯೋಗಿಗಳ ಚಂದಾದಾರಿಕೆಗಾಗಿ ಒಟ್ಟು ರೂ 125 ದಶಲಕ್ಷದವರೆಗೆ ಒಟ್ಟು ಮೊತ್ತದ ಈಕ್ವಿಟಿ ಷೇರುಗಳ ಕಾಯ್ದಿರಿಸುವಿಕೆಯನ್ನು ಈ ಕೊಡುಗೆಯು ಒಳಗೊಂಡಿದೆ. ಉದ್ಯೋಗಿಗಳ ಮೀಸಲು ಪಾಲನ್ನು ಇನ್ನು ಮುಂದೆ 'ನಿವ್ವಳ ಕೊಡುಗೆ' ಎಂದು ಉಲ್ಲೇಖಿಸಲಾಗುವುದು.

ಉದ್ಯೋಗಿ ಮೀಸಲಾತಿ ಪಾಲಿನಲ್ಲಿ ಬಿಡ್ ಮಾಡುವ ಅರ್ಹ ಉದ್ಯೋಗಿಗಳಿಗೆ ಪ್ರತಿ ಈಕ್ವಿಟಿ ಷೇರಿಗೆ ರೂ 30 ರಂತೆ ರಿಯಾಯ್ತಿ ನೀಡಲಾಗುವುದು.

ಹೊಸ ನೀಡಿಕೆಯಿಂದ ಸಂಗ್ರಹವಾಗುವ ಮೊತ್ತವನ್ನು ಕಂಪನಿಯು ತನ್ನ ಅಂಗಸಂಸ್ಥೆಯಾಗಿರುವ ಐಎಲ್‌ಎಸ್‌ಎಲ್ ಹೋಲ್ಡಿಂಗ್ಸ್ ಇಂಕ್, ಕಂಪನಿಯ ಹಾಗೂ ಕಂಪನಿಯ ಅಂಗಸಂಸ್ಥೆಯಾಗಿರುವ ಇಂಡೆಜೆನ್‌ದ ಬಂಡವಾಳ ವೆಚ್ಚದ ಅಗತ್ಯಗಳಿಗೆ ಹಣಕಾಸು ನೆರವು ಒದಗಿಸಲು, ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗೆ ಹಾಗೂ ವಹಿವಾಟು ವಿಸ್ತರಣೆ, ಸ್ವಾಧೀನ ಮತ್ತಿತರ ಉದ್ದೇಶಗಳಿಗೆ ಬಳಸಿಕೊಳ್ಳಲಿದೆ.

## ಮನೆ ಮನೆಗೆ ತೆರಳಿ ಮತದಾರರ ಚೀಟಿ ವಿತರಿಸಿದ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮೇ 7 ರಂದು ಮತದಾನ ನಡೆಯುವ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ನಗರದಲ್ಲಿ ಮನೆ ಮನೆಗೆ ತೆರಳಿ ಮತದಾರರ ಚೀಟಿ ವಿತರಿಸಿದರು.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಗೊಂಧಳಿ ಗಲ್ಲಿಯ ಮನೆಗಳಿಗೆ ಶುಕ್ರವಾರ(ಮೇ 3) ಭೇಟಿ ನೀಡಿ ಮತದಾರರ ಚೀಟಿಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಮತದಾರರು ತಮ್ಮ ಹೆಸರಿರುವ ಮತಗಟ್ಟೆಗಳನ್ನು ಗುರುತಿಸಲು ಮತದಾರರ ಚೀಟಿಯಿಂದ ಅನುಕೂಲವಾಗಲಿದೆ.

ಮತಗಟ್ಟೆಗಳ ಬಗ್ಗೆ ಖಚಿತ ಮಾಹಿತಿ ಲಭಿಸುವುದರಿಂದ ಮತದಾನದ ದಿನದಂದು ಮತಗಟ್ಟೆ ಹುಡುಕುವ ಗೊಂದಲ ಇರುವುದಿಲ್ಲ ಎಂದರು.

ಮತದಾರರಿಗೆ ಅನುಕೂಲ ಕಲ್ಪಿಸುವುದರ ಜತೆಗೆ ಮತದಾನ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಆಯಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬಿ.ಎಲ್.ಓ. ಗಳು ಮನೆ ಮನೆಗಳಿಗೆ ತೆರಳಿ ಮತದಾರರ ಚೀಟಿಗಳನ್ನು ವಿತರಿಸಲಿದ್ದಾರೆ. ಸಾರ್ವಜನಿಕರು ಮತದಾರರ ಚೀಟಿಗಳನ್ನು ಪಡೆದುಕೊಂಡು ನಿಗದಿತ ಮತಗಟ್ಟೆಗಳಿಗೆ ತೆರಳಿ ತಪ್ಪದೇ ತಮ್ಮ ಅಮೂಲ್ಯ ಮತವನ್ನು ಚಲಾಯಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮನವಿ ಮಾಡಿಕೊಂಡರು.

ಪ್ರೊಬೇಷನರಿ ಐ.ಎ..ಎಸ್. ಅಧಿಕಾರಿ ಶುಭಂ ಶುಕ್ಲಾ, ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯೂ ಆಗಿರುವ ಮಹಾನಗರ ಪಾಲಿಕೆ ಆಯುಕ್ತ ಪಿ.ಎನ್.ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

## ವಿಕಲಚೇತನರ ವಿಶೇಷ ಮತಗಟ್ಟೆ ಪರಿಶೀಲನೆ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣೆ–2024 ರ ಪ್ರಯುಕ್ತ ಬೆಂಗಳೂರಿನ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ರಾಜ್ಯ ಆಯುಕ್ತರು ದಾಸ್ ಸೂರ್ಯವಂಶಿ ಅವರು ಏ.29 ಮತ್ತು 30 ರಂದು ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಮತಗಟ್ಟೆಗಳನ್ನು ಪರಶೀಲಿಸಿದರು.

ವಿಕಲಚೇತನ ಮತದಾರರಿಗೆ ಮತದಾನ ಮಾಡಲು ಅನುಕೂಲವಾಗುವ ನಿಟ್ಟಿನಲ್ಲಿ ರಚಿಸಲಾಗಿರುವ ಬೆಳಗಾವಿ ಗ್ರಾಮೀಣ 131, ಬೆಳಗಾವಿ ಉತ್ತರ 38, ಬೆಳಗಾವಿ ದಕ್ಷಿಣ 08 ವಿಶೇಷ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂಬ ಮೇಳ ಜಾಥಾಗೆ ಚಾಲನೆ ನೀಡಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ

ಚಿಕ್ಕೋಡಿ: ಮೇ 07 ರಂದು ಜರುಗಲಿರುವ ಚುನಾವಣೆಯಲ್ಲಿ ಪ್ರತಿಯೊಬ್ಬರು ತಮ್ಮ ಮತದಾನದ ಹಕ್ಕನ್ನು ಕಡ್ಡಾಯವಾಗಿ ಚಲಾಯಿಸುವ ಮೂಲಕ ಸಧೃಡ ರಾಷ್ಟ್ರ ನಿರ್ಮಾಣ ಮಾಡಲು ಮುಂದಾಗಬೇಕು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ.ಸಿ.ಇ.ಓ ರಾಹುಲ ಶಿಂಧೆ ಅವರು ಕರೆ ನೀಡಿದರು.

ಚಿಕ್ಕೋಡಿ ತಾ.ಪಂ. ಕಚೇರಿ ಆವರಣದಲ್ಲಿ ಮತದಾನ ಜಾಗೃತಿಗಾಗಿ ಹಮ್ಮಿಕೊಳ್ಳಲಾಗಿದ್ದ ಕುಂಬ ಮೇಳ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು ಎಲ್ಲ ಮತದಾರರು ತಪ್ಪದೇ ಮತ ಚಲಾಯಿಸುವುದರಿಂದ ಪ್ರಜಾಪ್ರಭುತ್ವ ಗಟ್ಟಿಗೊಳ್ಳುತ್ತದೆ. ಮತದಾನದಿಂದ ಯಾರು ಕೂಡಾ ಹೊರಗುಳಿಯದೇ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದರು.

ಒಬ್ಬ ಮಹಿಳೆ ಕನಿಷ್ಠ ಹತ್ತು ಜನರಿಗಾದ್ರೂ ಮತದಾನ ಮಾಡುವಂತೆ ಪ್ರೇರೆಪಸಿಬೇಕು ಎಂದು ಕುಂಬ ಮೇಳದಲ್ಲಿ ಪಾಲ್ಗೊಂಡ ಮಹಿಳೆಯರಿಗೆ ತಿಳಿಸಿದರು. ಕಡ್ಡಾಯವಾಗಿ ಮತದಾನ ಮಾಡುವದರ ಜೊತೆಗೆ ತಮ್ಮ ಅಕ್ಕ, ಪಕ್ಕದವರಿಗೂ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿ ಮತ ಚಲಾಯಿಸಲು ಪ್ರೇರೆಪಿಸಬೇಕು. ಎಂದರು

ಕುಂಬ ಮೇಳ ತಾಲೂಕು ಪಂಚಾಯತ ಆವರಣದಿಂದ ಪ್ರಾರಂಭಗೊಂಡು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಕೊನೆಗೆ ಬಸ್ ನಿಲ್ದಾಣದ ಹತ್ತಿರ ಮುಕ್ತಾಯಗೊಳಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯಯೋಜನಾಧಿಕಾರಿ ಗಂಗಾಧರ ದಿವಟರ, ಜಿ.ಪಂ ಲೆಕ್ಕಾಧಿಕಾರಿ ಗಂಗಾ ಹಿರೇಮಠ , ತಾಪಂ. ಸಹಾಯಕ ನಿರ್ದೇಶಕ ಶಿವಾನಂದ ಶಿರಗಾಂವ, ಪುರಸಭೇ ಮುಖ್ಯಾಧಿಕಾರಿ ಮಹಾಂತೇಶ ನಿಡವಣಿ, ತಾಪಂ. ಸಹಾಯಕ ನಿರ್ದೇಶಕ ಎಸ್ ಎಸ್ ಮಠದ ವ್ಯವಸ್ಥಾಪಕರಾದ ಉದಯಗೌಡ ಪಾಟೀಲ ಜಿಲ್ಲಾ ಪಂಚಾಯತ ಜಿಲ್ಲಾ ಐ.ಇ.ಸಿ ಸಂಯೋಜಕ ಪ್ರಮೋದ ಗೋಡೆಕರ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ, ತಾಪಂ. ಸಿಬ್ಬಂದಿಗಳು, ಆಶಾ ಕಾರ್ಯಕರ್ತರು, ಅಂಗನವಾಡಿಕಾರ್ಯಕರ್ತರು ಎನ. ಆರ್.ಎಲ್.ಎಮ್. ಯೋಜನೆಯ ಮಹಿಳಾ ಸ್ವಸಹಾಯ ಸಂಘದವರು ಉಪಸ್ಥಿತರಿದ್ದರು.

## ದಾನಿಗಳಿಂದ ಕೆಎಲ್ಇ ಸಂಸ್ಥೆ ಬೆಳೆದಿದೆ, ಕಾಂಗ್ರೆಸ್ಸಿಂದ ಅಲ್ಲ!: ಡಾ.ಪ್ರಭಾಕರ ಕೋರೆ ಚಾಟಿ

108 ವರ್ಷಗಳ ಇತಿಹಾಸ ಹೊಂದಿರುವ ಕೆಎಲ್ಇ ಸಂಸ್ಥೆಯು ದಾನಿಗಳಿಂದ ಮಹಾದಾನಿಗಳಿಂದ ಬೆಳೆದುನಿಂತಿದೆ.

ಕೆಎಲ್ಇ ಸಂಸ್ಥೆಯ ಯಾವುದೇ ಇತಿಹಾಸವನ್ನು ಅರಿಯದೆ ಬಾಲಿಶವಾದ ಹೇಳಿಕೆಗಳನ್ನು ಕೊಡುವುದು ಉಚಿತವಾದುದಲ್ಲವೆಂದು ಕೆಎಲ್ಇ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಕಾಂಗ್ರೆಸ್ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ ಮಾತಿಗೆ ಪ್ರತ್ಯುತ್ತರ ನೀಡಿ ಚಾಟಿ ಬೀಸಿದ್ದಾರೆ.

ನಿನ್ನೆ ಕೆಎಲ್ಇ ವಿಶ್ವವಿದ್ಯಾಲಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳ್ಕರ ಪರ ಪ್ರಚಾರ ಸಭೆಯಲ್ಲಿ ಲಕ್ಷ್ಮೀ ಹೆಬ್ಬಾಳ್ಕರ 'ಕಾಂಗ್ರೆಸ್ ಸರ್ಕಾರ ಕೇವಲ ಒಂದು ರೂ.ಗೆ ಜಮೀನು ನೀಡಿದ ಫಲವೇ ಕೆಎಲ್ಇ ಆಸ್ಪತ್ರೆ ಹಾಗೂ ವಿಶ್ವವಿದ್ಯಾಲಯ ಬೆಳೆದಿದೆ' ಎಂದು ತಪ್ಪು ಮಾಹಿತಿಯನ್ನು ನೀಡಿದ್ದಕ್ಕಾಗಿ ಡಾ.ಪ್ರಭಾಕರ ಕೋರೆಯವರು ಅದನ್ನು ತೀವ್ರವಾಗಿ ಖಂಡಿಸಿದ್ದಾರೆ.

'ದಾನಿಗಳಿಂದ, ಮಹಾದಾನಿಗಳಿಂದ, ಸಿರಸಂಗಿ ಲಿಂಗರಾಜರು, ರಾಜಾಲಖಮಗೌಡರು, ಭೂಮರಡ್ಡಿ ಬಸಪ್ಪನವರಂಥ ತ್ಯಾಗವೀರರಿಂದ ಕೆಎಲ್ಇ ವಿಸ್ತಾರದಿಂ ವಿಸ್ತಾರಕ್ಕೆ ಬೆಳೆದುನಿಂತಿದೆ. ಇಲ್ಲಿ ಕಾಂಗ್ರೆಸ್, ಬಿಜೆಪಿ ಪಕ್ಷಗಳ ಪ್ರಶ್ನೆ ಉದ್ಭವಿಸಬಾರದು.

ಕೆಎಲ್ಇ ಸಂಸ್ಥೆ ಸ್ವಂತದ ಹಣದಲ್ಲಿ ಪ್ರಾರ್ಪಟಿ ಖರೀದಿಸಿದೆ. ಆಯಾ ಕಾಲಘಟ್ಟದಲ್ಲಿದ್ದ ಪಕ್ಷಗಳಿಂದ ಸಹಾಯ ಸಹಕಾರ ಪಡೆದಿದೆ. ಆದರೆ ಕೇವಲ ಕಾಂಗ್ರೆಸ್ಸಿಂದ ಕೆಎಲ್ಇ ತನ್ನ ಆಸ್ಪತ್ರೆ ನಿರ್ಮಿಸಿದೆ, ವಿ.ವಿ.ಗಳನ್ನು ಸ್ಥಾಪಿಸಿದೆ ಎಂಬರ್ಥದ ಹೇಳಿಕೆಗಳು ಇಂದಿನ ಪತ್ರಿಕೆಯಲ್ಲಿ ಪ್ರಕಟವಾಗಿರುವುದು ದುರದೃಷ್ಟಕರ.

ಕೆಎಲ್ಇ ಬೆಳವಣಿಗೆಯ ಇತಿಹಾಸವನ್ನು ಸರಿಯಾಗಿ ಅರ್ಥಮಾಡಿಕೊಳ್ಳದೆ "ಕಾಂಗ್ರೆಸ್"ನಿಂದ ಕೆಎಲ್ಇ ಬೆಳೆದಿದೆ ಎಂದು ಹೇಳಿರುವದನ್ನು ನಾನು ಪ್ರತಿಭಟಿಸುತ್ತೇನೆ.

ನಮ್ಮ ಕೆಎಲ್ಇ ಸಂಸ್ಥೆಯ ಆಡಳಿತ ಮಂಡಳಿಯಲ್ಲಿ ಎಲ್ಲ ರಾಜಕೀಯ ಪಕ್ಷಗಳಿಗೆ ಸೇರಿದವರು, ಬೆಂಬಲಿಸುವವರು ಇದ್ದಾರೆ. ಅದರರ್ಥ ನಾವು ಯಾವುದೇ ರಾಜಕೀಯ ಪಕ್ಷಕ್ಕೆ ಅಂಟಿಕೊಂಡಿಲ್ಲ. ವೈಯಕ್ತಿಕವಾಗಿ ಅವರ ನಿಲುವುಗಳನ್ನು ನೋಡಬೇಕು. ಶಿಕ್ಷಣ ಸಂಸ್ಥೆಯಲ್ಲಿ ನಾವು ರಾಜಕೀಯ ತರುವುದಿಲ್ಲ. ಅದರ ಬೆಳವಣಿಗೆಗಾಗಿ ಸರ್ವರ ಸಹಕಾರ ಪಡೆಯುತ್ತೇವೆ.

'ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ ಈ ನೆಲದ ಶಿಕ್ಷಣ ಸಂಸ್ಥೆಗಳ ನೈಜ ಇತಿಹಾಸವನ್ನು ಅರಿತುಕೊಂಡಂತೆ ಕಾಣುವುದಿಲ್ಲ. ಇತಿಹಾಸ ಅರಿಯದೆ ಯಾವುದೇ ರೀತಿಯ ಹೇಳಿಕೆಗಳನ್ನು ಕೊಡುವುದು ಸಮಂಜಸವೆನಿಸುವುದಿಲ್ಲ.

ಕೆಎಲ್ಇ ಸಂಸ್ಥೆಯ ಇತಿಹಾಸವನ್ನು ತಿಳಿದುಕೊಳ್ಳದೆ ಮತಬೇಟೆಗಾಗಿ ಸುಳ್ಳು ಹೇಳಿಕೆಗಳನ್ನು ನೀಡಿ ಜನರ ಭಾವನೆಗಳೊಂದಿಗೆ ಆಟವಾಡುವುದು ಕಾಂಗ್ರೆಸ್ಗೆ ತರವಲ್ಲ. ಲಕ್ಷ್ಮೀ ಹೆಬ್ಬಾಳ್ಕರ ಅವರು ತಮ್ಮ ಹ

## ಲೋಕಸಭೆ ಚುನಾವಣಾ ಜಾಹೀರಾತು-ಪೂರ್ವಾನುಮತಿ ಕಡ್ಡಾಯ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಲೋಕಸಭೆ ಚುನಾವಣೆ-2024 ಅಂಗವಾಗಿ ಮೇ 7, 2024ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೇ 6 ಹಾಗೂ 7 ರಂದು ಅಭ್ಯರ್ಥಿಗಳು/ಸಂಸ್ಥೆಗಳು ಅಥ-ವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ(ಎಂಸಿಎಂಸಿ) ಕಡೆಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಮೇ 4 ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.

**ಪೂರ್ವಾನುಮತಿಗೆ ಅರ್ಜಿ ಲಭ್ಯ:**

ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಅಗತ್ಯವಿರುವ ನಿಗದಿತ ನಮೂನೆಯ ಅರ್ಜಿ ನಮೂನೆಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ 'ವಾರ್ತಾಭವನ' ನ್ಯಾಯಾಲಯ ಆವರಣ, ಬೆಳಗಾವಿ- ಈ ಕಚೇರಿಯಿಂದ ಪಡೆಯಬಹುದು.ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾಮಟ್ಟದ ಎಂಸಿ-ಎಂಸಿ ಕಡೆಯಿಂದ ಪೂರ್ವಾನುಮತಿ ಪಡೆಯದ ಅಭ್ಯರ್ಥಿಗಳ ಜಾಹೀರಾತುಗಳನ್ನು ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

### ಗುಡಿಸಿಲಿಗೆ ಆಕಸ್ಮಿಕ ಬೆಂಕಿ: ಸ್ಥಳಕ್ಕೆ ಧಾವಿಸಿ ಮಾನವೀಯತೆ ಮೆರೆದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

## ಸಾಂತ್ವನ ಹೇಳಿ ವೈಯಕ್ತಿಕ 50 ಸಾವಿರ ನೆರವು ನೀಡಿದ ಸಚಿವರು

ಬಡಾಲ ಅಂಕಲಗಿ (ಬೆಳಗಾವಿ): ಬೆಳಗಾವಿ ತಾಲೂಕಿನ ಬಡಾಲ ಅಂಕಲಗಿ ಗ್ರಾಮದಲ್ಲಿ ಯಲ್ಲಪ್ಪ ಭೀಮಪ್ಪ ರಾಮಣ್ಣವರ್ ಎಂಬುವರ ಗುಡಿಸಿಲಿಗೆ ಆಕಸ್ಮಿಕವಾಗಿ ಬೆಂಕಿ ಬಿದ್ದು ಸಂಪೂರ್ಣ ಭಸ್ಮವಾಗಿದೆ. ವಿಷಯ ತಿಳಿದ ತಕ್ಷಣವೇ ಸ್ಥಳಕ್ಕೆ ಧಾವಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಅಪಾರ ನಷ್ಟದಿಂದ ತತ್ತ-ರಿಸಿದ ಕುಟುಂಬಕ್ಕೆ ಸಾಂತ್ವನ ಹೇಳಿದರು. ಜೊತೆಗೆ ವೈಯಕ್ತಿಕ 50 ಸಾವಿರ ನೆರವು ನೀಡಿದರು.

ಬಡಾಲ ಅಂಕಲಗಿ ಗ್ರಾಮದಲ್ಲಿ ಇಂದು ಮಧ್ಯಾಹ್ನ 2 ಗಂಟೆ ಸುಮಾರಿಗೆ ಯಲ್ಲಪ್ಪ ಭೀಮಪ್ಪ ರಾಮಣ್ಣವರ ಮನೆ ಆಕಸ್ಮಿಕ ಬೆಂಕಿ ಅನಾಹುತದಿಂದ ಸುಟ್ಟು ಕರಕಲಾಗಿದೆ. ಅನಾಹುತದಿಂದಾಗಿ ಶೆಡ್ ನಲ್ಲಿದ್ದ ಚಿನ್ನ, ಬೆಳ್ಳಿ, 2.50 ಲಕ್ಷ ರೂಪಾಯಿ ಹಣ, ಮನೆಯಲ್ಲಿನ ದಿನ ಬಳಕೆಯ ವಸ್ತುಗಳು ಸುಟ್ಟು ನಾಶವಾಗಿವೆ. ಯಲ್ಲಪ್ಪ ಭೀಮಪ್ಪ ರಾಮಣ್ಣವರ್ ಹೊಸ ಮನೆ ನಿರ್ಮಾಣ ಮಾಡುತ್ತಿದ್ದು, ಹೀಗಾಗಿ ಇಡೀ ಕುಟುಂಬ ಗುಡಿಸಿಲಿಗೆ ಸ್ಥಳಾಂತರಗೊಂಡಿತ್ತು. ಹಣ, ಒಡವೆ ಎಲ್ಲವೂ ಮನೆಯಲ್ಲಿದ್ದವು. ಆದರೆ ಆಕಸ್ಮಿಕವಾಗಿ ಬೆಂಕಿ ತಗುಲಿ ಕುಟುಂಬ ಎಲ್ಲವನ್ನೂ ಕಳೆದುಕೊಂಡಿದೆ. ಕುಟುಂಬದ ರೋಧನ ಮುಗಿಲುಮುಟ್ಟಿತ್ತು. ಚುನಾವಣೆ ಪ್ರಚಾರದಲ್ಲಿದ್ದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದರು. ಕುಟುಂಬಕ್ಕೆ ವೈಯಕ್ತಿಕವಾಗಿ 50 ಸಾವಿರ ರೂಪಾಯಿ ನೆರವು ನೀಡಿದ ಸಚಿವರು, 'ಇಂಥ ಕಷ್ಟದ ಪರಿಸ್ಥಿತಿಯನ್ನು ಧೈರ್ಯದಿಂದ ಎದುರಿಸಿ, ನಿಮ್ಮ ಜೊತೆಗೆ ನಾನಿದ್ದೇನೆ' ಎಂದು ಸಚಿವರು ಭರವಸೆ ನೀಡಿದರು.

## ಕೈ ಅಭ್ಯರ್ಥಿಗಳಿಗೆ ಬೆಂಬಲ ಘೋಷಿಸಿದ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ

ಬೆಳಗಾವಿ: ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯು ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ಸೂಚಿಸಲು ನಿರ್ಧಾರ ಮಾಡಲಾಗಿದೆ ಎಂದು ದಲಿತ ಸಂಘರ್ಷ ಸಮಿತಿಯ ಬಸವರಾಜ ತಳವಾರ ಹೇಳಿದ್ದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,

ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಸಂವಿಧಾನದ ಆಶಯಗಳನ್ನು ಗಾಳಿಗೆ ತೂರಿ, ಪ್ರಜಾಪ್ರಭುತ್ವ ವ್ಯವಸ್ಥೆ ನಾಶಪಡಿಸಲು ಹೊರಟಿದೆ. ಹಾಗಾಗಿ ಈ ಸಲದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸುತ್ತಿದ್ದೇವೆ ಎಂದರು.

ಬಿಜೆಪಿ ಸರ್ಕಾರ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು, ಕೈಗಾ-ರಿಕೆಗಳು ಮತ್ತು ಉದ್ಯಮಗಳನ್ನು ಖಾಸಗೀಕರಣ ಗೊಳಿಸಿ, ನಿರುದ್ಯೋಗ ಸಮಸ್ಯೆ ಸೃಷ್ಟಿಸಿದೆ. ತನಿಖಾ ಸಂಸ್ಥೆಗಳನ್ನು ತನ್ನ ಕೈಗೊಂಬೆಯಾಗಿ ಬಳಸಿಕೊಂಡು, ವಿರೋಧ ಪಕ್ಷಗಳ ನಾಯಕರ ಮನೆಗಳ ಮೇಲೆ ದಾಳಿ ಮಾಡುತ್ತಿದೆ. ಬಂಡವಾಳಶಾಹಿಗಳ ಹಿತಾಸಕ್ತಿಗೆ ಅನುಗುಣವಾಗಿ ಕೃಷಿಕರು, ಕಾರ್ಮಿಕರ ಕಾನೂನುಗಳನ್ನು ಬದಲಿಸುತ್ತಿದೆ. ಹಾಗಾಗಿ ಈ ಬಾರಿ ಬಿಜೆಪಿಗೆ ತಕ್ಕ ಪಾಠ ಕಲಿಸಲು ಮುಂದಾಗಿದ್ದೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಪ್ರಕಾಶ ಮರಡಿ ,ಲಕ್ಷ್ಮಣ ಗುಂಡಪ್ಪನವರ, ದುರಗಪ್ಪ ಮೇಲಿನಮನಿ, ರವೀಂದ್ರ ಸಣ್ಣಕ್ಕಿ ಮತ್ತಿತರರು ಇದ್ದರು.

## ಅಪರಿಚಿತ ವ್ಯಕ್ತಿ ಶವ ಪತ್ತೆ

ಬೆಳಗಾವಿ: ಸಾಂಬ್ರಾ ರೈಲು ನಿಲ್ದಾಣದ ಮಧ್ಯ ಚಲಿಸುತ್ತಿರುವ ರೈಲು ಗಾಡಿಯಿಂದ ಬಿದ್ದು ಅಪರಿಚಿತ ವ್ಯಕ್ತಿ ಮೃತಪಟ್ಟಿದ್ದಾನೆ. ಮೇ.03 ರಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಾಗಿರುತ್ತದೆ.

ಮೃತನ ಚಹರೆ: ವಯಸ್ಸು 40-45, 5'6 ಎತ್ತರ, ಕಪ್ಪು ಮೈಬಣ್ಣ, ದುಂಡು ಮುಖ, ಮೀಸೆ ದಾಡಿ ಬಿಟ್ಟಿರುತ್ತಾನೆ, ಚಾಕಲೇಟ್ ಬಣ್ಣದ ಆರೆಂಜ್ ಕಲರ್ ಚುಕ್ಕಿಯುಳ್ಳ ಪುಲ್ ಶರ್ಟ್ ಹಾಗೂ ಹಸಿರು ಬಣ್ಣದ ಪುಲ್ ಶರ್ಟ್, ಕ್ರೀಮ್ ಕಲರ್ ಪುಲ್ ಪ್ಯಾಂಟ್ ಹಾಗೂ ಬೂದಿ ಬಣ್ಣದ ಹಾಪ್ ಪ್ಯಾಂಟ್ ಧರಿಸಿರುತ್ತಾನೆ.

ಸದರಿ ಮೃತ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ದೂರವಾಣಿ: 0831-2405273 ಅಥವಾ ರೈಲ್ವೆ ಪೊಲೀಸ್ ನಿಯಂತ್ರಣ ಕೊಠಡಿ ಸಂಖ್ಯೆಗೆ 08022871291 ಪಿ.ಎಸ್.ಐ ದೂರವಾಣಿ.9480802127 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೂರದೃಷ್ಟಿ ಇರುವ ನರೇಂದ್ರ ಮೋದಿಯವರು ಮತ್ತೆ ಪ್ರಧಾನಿ ಆಗಬೇಕು: ಜಗದೀಶ್ ಶೆಟ್ಟರ್

ಬೆಳಗಾವಿ: ನರೇಂದ್ರ ಮೋದಿಯವರ ಆಡಳಿತ, ಅವರ ದೂರದೃಷ್ಟಿ ಹಾಗೂ ಅವರ ಆರ್ಥಿಕ ನೀತಿಯಿಂದ ದೇಶ ಅಭಿವೃದ್ಧಿ ಆಗಿದೆ. ದೇಶವನ್ನು ಸೂಪರ್ ಪಾವರ್ ಮಾಡಲು ಮೋದಿಯವರು ಮತ್ತೆ ಪ್ರಧಾನಿ ಆಗಬೇಕು ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರು ಕರೆ ನೀಡಿದ್ದಾರೆ.

ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿ ಉತ್ತರ ಮತಕ್ಷೇತ್ರದ ಚಿತ್ರೆವಾಡ ನಲ್ಲಿ ಕೊನ್ವಾನ್ ಗಲ್ಲಿ, ರಾಮಲಿಂಗಚೆಂಡ್ ಗಲ್ಲಿ, ಶಿವಾಜಿ ರಸ್ತೆ, ಮುಜಾವರ ಗಲ್ಲಿ, ಅನ್ಸರ್ಕರ್ ಗಲ್ಲಿ, ತಿಲಕ್ ಚೌಕ್, ಬಸವನ ಗಲ್ಲಿ, ದೇಶಪಾಂಡೆ ಗಲ್ಲಿ ಹಾಗೂ ಮಾರುತಿಗಲ್ಲಿಯ ಪ್ರಮುಖರೊಂದಿಗೆ ಪ್ರಚಾರ ಸಭೆ ನಡೆಸಿ, ಮತಯಾಚನೆ

ಮಾಡಲಾಯಿತು.

ಬಹಿರಂಗ ಸಭೆ ನಡೆಸಿ ಮತಯಾಚನೆ ಮಾಡಿ, ಮಾತನಾಡಿದ ಜಗದೀಶ್ ಶೆಟ್ಟರ್ ಅವರು, ಪ್ರಧಾನಿ ನರೇಂದ್ರ ಮೋದಿಯವರು ಭ್ರಷ್ಟಾಚಾರ ರಹಿತ ಆಡಳಿತ ನೀಡಿದ್ದಾರೆ. ಉತ್ತಮ ಸರ್ಕಾರದ ಹೇಗೆ ಇರಬೇಕು ಎಂಬುವುದಕ್ಕೆ ನರೇಂದ್ರ ಮೋದಿಯವರ ಸರ್ಕಾರ ಉತ್ತಮ ಉದಾಹರಣೆ ಆಗಿದೆ. ಆರ್ಥಿಕ ನೀತಿ ಗಟ್ಟಿಗೊಳಿಸುವ ಮೂಲಕ ದೇಶದ ಪ್ರಗತಿ ಯಾವ ರೀತಿ ಮಾಡಬೇಕು ಎಂದು ಮೋದಿಯವರು ತೋರಿಸಿಕೊಟ್ಟಿದ್ದಾರೆ.

2014 ರಲ್ಲಿ ಕಾಂಗ್ರೆಸ್ ಅಧಿಕಾರ ಬಿಟ್ಟು, ನರೇಂದ್ರ ಮೋದಿ ಅಧಿಕಾರ ವಹಿಸಿದಾಗ ದೇಶ ಆರ್ಥಿಕವಾಗಿ 14 ನೇ ಸ್ಥಾನದಲ್ಲಿ ಇತ್ತು, ಆದರೆ ಮೋದಿಯವರ 10 ವರ್ಷದ ಆಡಳಿತದಲ್ಲಿ 14 ನೇ ಸ್ಥಾನದಲ್ಲಿ ಇದ್ದ ಆರ್ಥಿಕತೆಯನ್ನು 5 ನೇ ಸ್ಥಾನಕ್ಕೆ ತಗೆದುಕೊಂಡು ಬಂದಿದ್ದಾರೆ. ಇನ್ನೂ ಎರಡೆ ವರ್ಷದಲ್ಲಿ ಭಾರತ ಮೂರನೇ ಸ್ಥಾನಕ್ಕೆ ಬರಲಿದೆ. 10-15. ವರ್ಷದಲ್ಲಿ ಭಾರತ ನಂಬರ್ ಒನ್ ಆಗಿ ಸೂಪರ್ ಪಾವರ್ ಆಗುತ್ತದೆ ಎಂದು ತಿಳಿಸಿದರು.

ಪಾಕಿಸ್ತಾನದ ಪ್ರತಿಪಕ್ಷದ ನಾಯಕ ಮುಜಮಲ್ ರೆಹಮಾನ್ ಎನ್ನುವರು ಮೋದಿಯವರ ನಾಯಕತ್ವ ನೋಡಿ ದೇಶ ಮುನ್ನಡೆಸಬೇಕು ಎಂದು ತಮ್ಮ ದೇಶದ ಸರ್ಕಾರಕ್ಕೆ ಒತ್ತಾಯ ಮಾಡಿದ್ದಾರೆ.

ಈ ವಿಷಯವನ್ನು ಅನೇಕ ಪತ್ರಿಕೆಯಲ್ಲಿ ಪ್ರಕಟಿಸಲಾಗಿದೆ. ಹಾಗಾಗಿ ನಾವೆಲ್ಲರೂ ದೇಶದ ಭವಿಷ್ಯ, ದೇಶದ ಸುರಕ್ಷತೆ, ಹೀಗೆ ಅನೇಕ ಕಾರಣಗಳ ಸಲುವಾಗಿ ಮೋದಿವರನ್ನು ಮತ್ತೆ ಪ್ರಧಾನಿ ಮಾಡಬೇಕು. ಆ ನಿಟ್ಟಿನಲ್ಲಿ ನನಗೆ ಲೋಕಸಭೆಗೆ ಕಳುಹಿಸಿ ಗೆಲ್ಲಿಸಬೇಕು ಎಂದು ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ಅನಿಲ ಬೆನಕೆ, ಪ್ರಮುಖರಾದ ಮುರಘೆಂದ್ರಗೌಡ ಪಾಟೀಲ್, ನಗರ ಸೇವಕರಾದ ಸಂತೋಷ ಪೇಡನೆಕರ, ಜಯತೀರ್ಥ ಸವದತ್ತಿ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

## ಲೋಕಸಭಾ ಚುನಾವಣೆ: ಮೇ.7ರಂದು ಮತಕೇತ್ರದ ವ್ಯಾಪ್ತಿಯಲ್ಲಿ ಸಂತೆ-ಜಾತ್ರೆ ನಿಷೇಧ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ-2024 ಮೇ.7 ರಂದು ಮತದಾನ ನಡೆಯಲಿದ್ದು, ಮತದಾನ ದಿನದಂದು ಬೆಳಗಾವಿ ಜಿಲ್ಲೆಯಾದ್ಯಂತ 01 ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ, 02 ಬೆಳಗಾವಿ ಲೋಕಸಭಾ ಮತಕ್ಷೇತ್ರ ಹಾಗೂ 12 ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದ ಚನ್ನಮ್ಮನ ಕಿತ್ತೂರು ಮತ್ತು ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ ನಡೆಯುವ ಸಂತೆ ಜಾತ್ರೆಯನ್ನು ನಿಷೇಧಿಸಿ ಜಿಲ್ಲಾ ಚುನಾವಣಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಆದೇಶವನ್ನು ಹೊರಡಿಸಿದ್ದಾರೆ.

### ಲೋಕಸಭಾ ಚುನಾವಣೆ-2024; ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ

## ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಿ: ಜಿ.ಎಸ್. ಪಾಂಡಾ ದಾಸ

ಚಿಕ್ಕೋಡಿ: ಪ್ರಸಕ್ತ ಲೋಕಸಭಾ ಚುನಾವಣೆಗೆ ಮತದಾನ ದಿನ ಹತ್ತಿರವಾಗುತ್ತಿದೆ. ಈ ಬಾರಿಯ ಲೋಕಸಭಾ ಚುನಾವಣೆ ಅತೀ ವಿಶೇಷವಾಗಿದ್ದು ಚುನಾವಣಾ ಅಭ್ಯರ್ಥಿಗಳು ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾ ವೀಕ್ಷಕರಾದ ಶ್ರೀ ಜಿ. ಎಸ್.ಪಾಂಡಾ ದಾಸ್ ಅವರು ತಿಳಿಸಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ (ಮೇ.2) ರಂದು ಜರುಗಿದ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಚುನಾವಣಾ ಅಭ್ಯರ್ಥಿಗಳ ಸಭೆಯಲ್ಲಿ ಅವರು ಮಾತನಾಡಿದರು. ಅತೀ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರೊವಾದ ನಮ್ಮ ದೇಶದಲ್ಲಿ ಜರುಗುತ್ತಿರುವ ಲೋಕಸಭಾ ಚುನಾವಣೆಯ ಪ್ರಕ್ರಿಯೆಗಳನ್ನು ವೀಕ್ಷಿಸಲು ಈ ಬಾರಿ ವಿವಿಧ ದೇಶಗಳ ಪ್ರತಿನಿಧಿಗಳು ಆಗಮಿಸಿ ಇಲ್ಲಿಯ ಚುನಾವಣೆ ಪ್ರಕ್ರಿಯೆಗಳನ್ನು ವೀಕ್ಷಿಸುತ್ತಿರುವದು ವಿಶೇಷವಾಗಿದೆ. ಶಾಂತ ಹಾಗೂ ನ್ಯಾಯಸಮ್ಮತ ಚುನಾವಣಾ ಪ್ರಕ್ರಿಯೆ ಜರುಗಲು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ರಾಜಕೀಯ ಪಕ್ಷಗಳು ಹಾಗೂ ಚುನಾವಣಾ ಅಭ್ಯರ್ಥಿಗಳು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದರು.

ಚುನಾವಣೆಗೆ ಸಂಬಂಧಿಸಿದಂತೆ ಅಧಿಕಾರಿ, ಸಿಬ್ಬಂದಿಗಳಿಗೆ ಹಾಗೂ ಚುನಾವಣಾ ಅಭ್ಯರ್ಥಿಗಳಿಗೆ ಅವರದೇ ಆದಂತಹ ಜವಾಬ್ದಾರಿಗಳಿದ್ದು ತಮ್ಮ ಜವಾಬ್ದಾ-ರಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಆಗದಂತೆ ನಿಗಾವಹಿಸಬೇಕು. ಚುನಾವಣಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದರ ಮೂಲಕ ಯಾವುದೇ ದೂರುಗಳು ದಾಖಲಾಗದಂತೆ ನಿಗಾವಹಿಸಲು ಶ್ರೀ ಜಿ.ಎಸ್.ಪಾಂಡಾ ದಾಸ ತಿಳಿಸಿದರು.

ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿಗಳಾದ ಶ್ರೀ ರಾಹುಲ ಶಿಂಧೆ ಅವರು ಮಾತನಾಡಿ ಲೋಕಸಭಾ ಚುನಾವಣೆ-2024ರ ಮತದಾನಕ್ಕಿಂತ ಮೊದಲ 72 ಹಾಗೂ ಗಂಟೆಗಳ ಅವಧಿಯಲ್ಲಿ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಬೇಕು ಎಂದರು. ಮತದಾನಕ್ಕೂ 48 ಗಂಟೆಗಳ ಮುಂಚೆ ಬಹಿರಂಗ ಪ್ರಚಾರ ಅಂತ್ಯಗೊಳ್ಳುತ್ತದೆ. ಈ ಅವಧಿಯಲ್ಲಿ ಕ್ಷೇತ್ರದ ಮತದಾರರಲ್ಲದ ತಾರಾ ಪ್ರಚಾರಕರು, ಇತರರು ಕ್ಷೇತ್ರದಿಂದ ಹೊರ ಹೊಗಬೇಕು ಈ ಕುರಿತು ನಿರಂತರವಾಗಿ ನಿಗಾವಹಿಸಲಾಗುತ್ತಿರುತ್ತದೆ ಎಂದು ತಿಳಿಸಿದರು. ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸ ಬೇಕಾದರೆ ಅಭ್ಯರ್ಥಿಗಳು ಪೂರ್ವಾನುಮತಿ ಪಡೆದುಕೊಳ್ಳಬೇಕು. ಅಭ್ಯರ್ಥಿಗಳು ಮತಗಟ್ಟೆಗಳಿಗೆ ಒಬ್ಬ ಪೊಲಿಂಗ್ ಏಜೆಂಟರನ್ನು ನೇಮಕ ಮಾಡಲು ಅವಕಾಶವಿದ್ದು ಏಜೆಂಟಗಳ ನೇಮಕಾತಿಗಾಗಿ ಅಗತ್ಯ ದಾಖಲೆಗಳನ್ನು ಒದಗಿಸಬೇಕು. ಮತಗಟ್ಟೆಗಳಲ್ಲಿ ಮೋಬೈಲ ಫೋನಗಳಿಗೆ ಅವಕಾಶವಿರುವುದಿಲ್ಲ. ಮತಗಟ್ಟೆ 100 ಮೀಟರ ವ್ಯಾಪ್ತಿಯಲ್ಲಿ ನಿಷೇದಾಜ್ಞೆ ಜಾರಿ ಇದ್ದು ಮೊಬೈಲ್ ಫೋನ್, ಚುನಾವಣಾ ಪ್ರಚಾರ ಹಾಗೂ ಬ್ಯಾನರ ಅಳವಡಿಸಲು ಅವಕಾಶವಿರುವುದಿಲ್ಲ ಎಂದು ತಿಳಿಸಿದರು.

ಮತದಾನದ ದಿನದಂದು ಅಭ್ಯರ್ಥಿಗಳು ಬಳಸುವ ವಾಹನಗಳ ಅನುಮತಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಮತದಾನದ ದಿನದಂದು ವಿತರಿಸುವ ಮತದಾರರ ಸ್ಲೀಪಗಳಲ್ಲಿ ಅಭ್ಯರ್ಥಿಯ ಭಾವಚಿತ್ರ ಅಥವಾ ಚಿಹ್ನೆಯನ್ನು ಬಳಸಬಾರದು. ಯಾವುದೆ ಸುಳ್ಳು ಮಾಹಿತಿಗೆ ಕಿವಿಗೊಡದೆ ಸಂದೇಹಗಳಿದ್ದರೆ ಸೆಕ್ಟರ ಅಧಿಕಾರಿ ಅಥವಾ ನಮಗೆ ತಿಳಿಸಿದ್ದಲ್ಲಿ ಸಂದೇಹ ಕುರಿತು ವಿವರಣೆಯನ್ನು ನೀಡಲಾಗುವುದು ಒಟ್ಟಾರೆಯಾಗಿ ಶಾಂತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಎಲ್ಲ ಮುಂಜಾಗೃತೆ ಕ್ರಮಗಳನ್ನು ಕೈಗೊಳ್ಳಲಾಗಿದ್ದು ಚುನಾವಣಾ ಅಭ್ಯರ್ಥಿಗಳು ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ತಿಳಿಸಿದರು.

ಸಭೆಯಲ್ಲಿ ವಿವಿಧ ರಾಜಕಿಯ ಪಕ್ಷಗಳ ಪ್ರತಿನಿಧಿಗಳು, ಚುನಾವಣಾ ಅಭ್ಯರ್ಥಿಗಳು ಉಪಸ್ಥ